09 ಆಗಸ್ಟ್ 2025 ಶನಿವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 151 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629

ಜನಮನದ ದನಿ

ಪ್ರಜೋದಯ

ದಿನಪತ್ರಿಕೆ

ಸಂಪಾದಕ : ಜೆ.ಆರ್. ಕೆಂಚೇಗೌಡ



ಆಸ್ಟ್ರೇಲಿಯಾ ತಂಡವನ್ನು ಅದರ ತವರಿನಲ್ಲಿ ಎದುರಿಸುವುದರಿಂದ ನಾವು ಆಟದಲ್ಲಿ ಸುಧಾರಿಸಬೇಕಾಗಿರುವುದು ಎಲ್ಲೆಲ್ಲಿ ಎಂಬುದನ್ನು ತಿಳಿದುಕೊಳ್ಳಲು ನೆರವಾಗಲಿದೆ. ಮುಂದಿನ ತಿಂಗಳ ಏಷ್ಯಾ ಕಪ್‌ಗೆ ಸಿದ್ಧತೆಗೂ ನಮಗೆ ಅನುಕೂಲವಾಗಲಿದೆ ಎಂದು ಭಾರತ ಹಾಕಿ ತಂಡದ ನಾಯಕ ಹರ್ಮನ್ ಪ್ರೀತ್ ಸಿಂಗ್ ಶುಕ್ರವಾರ ತಿಳಿಸಿದರು.

ಭಾರತದ ಗ್ರಂಥಾಲಯ ಪಿತಾಮಹ » 2

ಜನತಂತ್ರಕ್ಕೆ ನೇಣು ಬಿಗಿಯುವ ದೂರ್ತ ಹುನ್ನಾರ » 3

ರಾಹುಲ್ ಗಾಂಧಿ ತಪ್ಪು ಮಾಹಿತಿ: ಲಿಂಬಾವಳಿ » 4

ಇಡೀ ದೇಶದಲ್ಲೇ ಮತಗಳ್ಳತನ: ರಾಹುಲ್

ಸಾಬೀತು ಪಡಿಸಲು ಮತದಾರರ ಪಟ್ಟಿ, ಮತಗಟ್ಟೆ ದೃಶ್ಯಾವಳಿ ಬಿಡುಗಡೆಗೊಳಿಸಿ | ಚುನಾವಣೆ ಆಯೋಗಕ್ಕೆ ಸವಾಲು

• ಪ್ರಜೋದಯ ವರದಿ

ಬೆಂಗಳೂರು: ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕ ಮಾತ್ರವಲ್ಲ ಇಡೀ ದೇಶದಲ್ಲಿ ಮತಗಳ್ಳತನವಾಗಿದೆ. ಡಿಜಿಟಲ್ ರೂಪದಲ್ಲಿ ದೇಶದ ಮತದಾರರ ಪಟ್ಟಿ, ಮತಗಟ್ಟೆಗಳ ದೃಶ್ಯಾವಳಿ ನೀಡಿದರೆ ಮತಗಳ್ಳತನವನ್ನು ಸಾಬೀತು ಮಾಡುವೆ ಎಂದು ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ಚುನಾವಣೆ ಆಯೋಗಕ್ಕೆ ಸವಾಲು ಹಾಕಿದರು.

ಫ್ರೀಡಂ ಪಾರ್ಕ್‌ನಲ್ಲಿ ಕಾಂಗ್ರೆಸ್‌ನಿಂದ ಶುಕ್ರವಾರ ಹಮ್ಮಿಕೊಂಡಿದ್ದ ನಮ್ಮ ಮತ, ನಮ್ಮ ಹಕ್ಕು, ನಮ್ಮ ಹೋರಾಟ ಸಮಾವೇಶದಲ್ಲಿ ಮಾತನಾಡಿದ ಅವರು, ವಿಳಾಸವಿಲ್ಲದ 40,000ಕ್ಕೂ ಹೆಚ್ಚು ಮತದಾರರನ್ನು ಪತ್ತೆಹಚ್ಚಿದ್ದೇವೆ. ಈ ದತ್ತಾಂಶವನ್ನು ಇಟ್ಕೊಂಡು ದೇಶದ ಪ್ರಜೆಗಳು ಪ್ರಶ್ನಿಸುತ್ತಾರೆಂದು ಚುನಾವಣಾ ಆಯೋಗದ ವೆಬ್‌ಸೈಟ್ ಬಂದ್ ಮಾಡಿದೆ ಎಂದು ಆರೋಪಿಸಿದರು.

ಕಳೆದ ಚುನಾವಣೆಯಲ್ಲಿ ಸಂವಿಧಾನವನ್ನು ನಾವು ರಕ್ಷಣೆ ಮಾಡಿದ್ದೇವೆ. ಅಂಬೇಡ್ಕರ್, ನೆಹರು, ಗಾಂಧೀಜಿ, ಪಟೇಲ್ ಅವರ ಧ್ವನಿ ಮೊಳಗುತ್ತೆ. ಕರ್ನಾಟಕದಲ್ಲಿ ಆಂತರಿಕ ಸಮೀಕ್ಷೆ ಪ್ರಕಾರ ನಮಗೆ 15 ರಿಂದ 16 ಸ್ಥಾನ ಬರುವ ವಿಶ್ವಾಸ ಇತ್ತು. ಆದರೆ, ಲೋಕಸಭೆ ಚುನಾವಣೆಯಲ್ಲಿ ನಮಗೆ ಕೇವಲ 9 ಸ್ಥಾನ ಬಂದಿದೆ. ಹೀಗಾಗಿ ಬೆಂಗಳೂರು ಕೇಂದ್ರ ಕ್ಷೇತ್ರದಲ್ಲಿ ಮಾಹಿತಿ ಕಲೆಹಾಕಿದ್ದೆವು. 5 ವಿಧಗಳಲ್ಲಿ ಮತಗಳ್ಳತನವಾಗಿದೆ. » ನಾಲ್ಕನೇ ಪುಟದಲ್ಲಿ

ಆಯೋಗಕ್ಕೆ ರಾಹುಲ್ ಗಾಂಧಿ 5 ಪ್ರಶ್ನೆ

ಏಕೆ ಡಿಜಿಟಲ್ ದಾಖಲೆ ನೀಡುತ್ತಿಲ್ಲ?
ಬಹುದೊಡ್ಡ ವಂಚನೆ ಏಕೆ ಮಾಡಲಾಗುತ್ತಿದೆ?
ಬಿಜೆಪಿ ಏಜೆಂಟ್ ರೀತಿ ಏಕೆ ಆಯೋಗ ನಡೆದುಕೊಳ್ಳುತ್ತಿದೆ?
ವಿರೋಧ ಪಕ್ಷಗಳನ್ನು ಏಕೆ ಬೆದರಿಸಲಾಗುತ್ತಿದೆ?
ಏಕೆ ವಿಡಿಯೋ ಫೂಟೇಜ್ ಡಿಲೀಟ್ ಮಾಡಲಾಗುತ್ತಿದೆ?

ನನ್ನ ಸುದೀರ್ಘ ರಾಜಕೀಯ ಜೀವನದಲ್ಲಿ 2019ರ ಸೋಲು ಹೊರತುಪಡಿಸಿ, ಎಂದಿಗೂ ಚುನಾವಣೆಯಲ್ಲಿ ಸೋಲು ಅನುಭವಿಸಿಲ್ಲ. ನನ್ನ ಜೀವನದಲ್ಲಿ 12ಕ್ಕೂ ಹೆಚ್ಚು ಚುನಾವಣೆಗಳನ್ನು ಗೆದ್ದಿದ್ದೇನೆ. ಆದರೆ 2019ರ ಲೋಕಸಭಾ ಚುನಾವಣೆಯಲ್ಲಿ ಮೊದಲ ಬಾರಿಗೆ ಚುನಾವಣಾ ಅಕ್ರಮದಿಂದಾಗಿ ನಾನು ಸೋತಿದ್ದೇನೆ.
-ಮಲ್ಲಿಕಾರ್ಜುನ ಖರ್ಗೆ, ಎಐಸಿಸಿ ಅಧ್ಯಕ್ಷ

ಆಯೋಗ ಬಿಜೆಪಿ ಶಾಖಾ ಕಚೇರಿ: ಸಿಎಂ

ಚುನಾವಣಾ ಆಯೋಗ ಬಿಜೆಪಿಯ ಶಾಖಾ ಕಚೇರಿಯಾಗಿದೆ. ಮತಗಳ್ಳತನದ ವಿರುದ್ಧ ಕರ್ನಾಟಕ ರಾಜ್ಯದಿಂದ ಆರಂಭವಾಗಿರುವ ಪ್ರತಿಭಟನಾ ಅಭಿಯಾನ ಇಡೀ ದೇಶಾದ್ಯಂತ ವ್ಯಾಪಿಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ಸಮಾವೇಶದಲ್ಲಿ ಮಾತನಾಡಿದ ಅವರು, ರಾಹುಲ್ ಗಾಂಧಿ ಅವರು ಸಂಪೂರ್ಣವಾಗಿ ಅಧ್ಯಯನ ಮಾಡಿ, ಮತದಾನದ ಅಂಕಿ-ಅಂಶಗಳನ್ನು ಸಂಗ್ರಹಿಸಿ ವಿಶ್ಲೇಷಣೆ ಮಾಡಿ ದಾಖಲೆಗಳ ಸಮೇತ ದೇಶದ ಜನರ ಮುಂದೆ ಇಟ್ಟಿದ್ದಾರೆ. ಚುನಾವಣಾ ಆಯೋಗ ಸಂವಿಧಾನದ ಅಡಿಯಲ್ಲಿ ನ್ಯಾಯಬದ್ಧವಾಗಿ ನಡೆದುಕೊಳ್ಳಬೇಕು. ಸಂವಿಧಾನ ಕೊಟ್ಟಿರುವ ಮತದಾನದ ಮೂಲ ಭೂತ ಹಕ್ಕನ್ನು ಯಾರೂ ಕಿತ್ತುಕೊಳ್ಳಲು ಸಾಧ್ಯವಿಲ್ಲ. ಅದಕ್ಕೆ ದೇಶದ ಜನತೆ ಅವಕಾಶ ಕೊಡುವುದಿಲ್ಲ ಎಂದರು.

ಮನುವಾದಿಗಳು ಸಂವಿಧಾನ ವಿರೋಧಿಗಳು. ಇವರು ಸಂವಿಧಾನದ ಪ್ರಕ್ರಿಯೆಯನ್ನೇ ತಪ್ಪುದಾರಿಗೆ ಎಳೆಯುತ್ತಿದ್ದಾರೆ. ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ನಡೆದಿರುವ ವಂಚನೆ ಕಾರಣದಿಂದ ಸೆಂಟ್ರಲ್ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಸೋತಿದೆಯೇ ಹೊರತು ಜನಾಭಿಪ್ರಾಯ ಕಾಂಗ್ರೆಸ್ ಪರವಾಗಿಯೇ ಇತ್ತು ಎನ್ನುವುದು ಈಗ ಗೊತ್ತಾಗಿದೆ. ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ರಾಜ್ಯದಲ್ಲಿ 14 ಸೀಟುಗಳನ್ನು ಗೆಲ್ಲಬೇಕಿತ್ತು. ಆದರೆ, ಮತಗಳ್ಳತನದ ಕಾರಣದಿಂದ ನಾವು ಸೋತಿದ್ದೇವೆ. ಇವಿಎಂ ಬಂದ ಮೇಲೆ ಇವನ್ನು ದುರುಪಯೋಗ ಮಾಡಿಕೊಳ್ಳುವ ಕೆಲಸ ಆಗುತ್ತಿರುವುದು ಈಗ ದಾಖಲೆ ಸಮೇತ ಸಿಕ್ಕಿಬಿದ್ದಿದ್ದಾರೆ ಎಂದು ಹೇಳಿದರು.

ಮತಕಳವು ಘೋಷಣೆಗೆ ಸಹಿ ಹಾಕಿ ಇಲ್ಲವೇ ಕ್ಷಮೆ ಕೇಳಿ: ಆಯೋಗ

• ಪ್ರಜೋದಯ ವರದಿ

ನವದಹಲಿ: ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಮತಗಳ್ಳತನದ ಆರೋಪ ಘೋಷಣೆಗೆ ಸಹಿ ಹಾಕಬೇಕು. ಇಲ್ಲವೇ ದೇಶದ ಜನರೆದುರು ಕ್ಷಮೆ ಕೋರಬೇಕು ಎಂದು ಚುನಾವಣಾ ಆಯೋಗದ ಮೂಲಗಳು ಶುಕ್ರವಾರ ಪ್ರತಿಕ್ರಿಯಿಸಿವೆ.

ತಮ್ಮ ವಿಶ್ಲೇಷಣೆ ಸತ್ಯವೆಂದು ಮತ್ತು ಆಯೋಗದ ವಿರುದ್ಧದ ಆರೋಪಗಳು ನಿಜವೆಂದು ರಾಹುಲ್ ಗಾಂಧಿ ಅವರು ಭಾವಿಸಿದ್ದರೆ, ತಮ್ಮ ಘೋಷಣೆಗೆ ನಿಯಮಗಳ ಆಧಾರದಲ್ಲಿ ಸಹಿ ಹಾಕಲು ಹಾಗು ಮತದಾರರ ಪಟ್ಟಿಗೆ ತಪ್ಪಾಗಿ ಸೇರಿಸಲಾಗಿರುವ ಅಥವಾ ಕೈಬಿಟ್ಟಿರುವ ಹೆಸರುಗಳ ವಿವರ ನೀಡಲು ಹಿಂಜರಿಯಬಾರದು ಹೇಳಿವೆ.

ಒಂದು ವೇಳೆ ರಾಹುಲ್ ಗಾಂಧಿ ಅವರು ತಮ್ಮ ಘೋಷಣೆಗೆ ಸಹಿ ಹಾಕದಿದ್ದರೆ, ವಿಶ್ಲೇಷಣೆ ಮೇಲೆ ಅವರಿಗೇ ನಂಬಿಕೆ ಇಲ್ಲ ಎಂದರ್ಥ. ಹಾಗಾದಲ್ಲಿ ಅವರು ದೇಶದ ಜನರ ಕ್ಷಮೆ ಕೇಳಬೇಕು ಎಂದು ಸ್ಪಷ್ಟವಾಗಿ ಉಲ್ಲೇಖಿಸಿವೆ.

ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕರಾಗಿರುವ ರಾಹುಲ್, ಕರ್ನಾಟಕದ ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರಕ್ಕೆ ಸಂಬಂಧಿಸಿದ ದಾಖಲೆಗಳನ್ನು ಹಂಚಿಕೊಂಡು ಮತಗಳ್ಳತನದ ಆರೋಪ ಮಾಡಿದ್ದರು. ಅದಕ್ಕೆ ಪೂರಕವಾಗಿ ದಾಖಲೆಗಳನ್ನೂ ಹಂಚಿಕೊಂಡಿದ್ದರು.

ವೆಬ್‌ಸೈಟ್ ಹ್ಯಾಕ್ ಆಗಿಲ್ಲ

ಹಲವು ರಾಜ್ಯದಲ್ಲಿನ ಚುನಾವಣಾ ಆಯೋಗದ ವೆಬ್‌ಸೈಟ್ ಸೇವೆಯಲ್ಲಿ ವ್ಯತ್ಯಯವಾಗಿದೆ ಎಂದು ನೆಟ್ಟಿಗರು ಸಾಮಾಜಿಕ ಮಾಧ್ಯಮಗಳಲ್ಲಿ ಪೋಸ್ಟ್‌ಗಳನ್ನು ಹಂಚಿಕೊಂಡಿದ್ದಾರೆ. ಆದರೆ ಈ ಆರೋಪಗಳನ್ನು ಚುನಾವಣಾ ಆಯೋಗ ಅಲ್ಲಗಳೆದಿದೆ.

ಕಾಂಗ್ರೆಸ್ ಹಾಗು ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕ » ನಾಲ್ಕನೇ ಪುಟದಲ್ಲಿ

ತಹಶೀಲ್ದಾರ್ ಮಧ್ಯ ಪ್ರವೇಶ | ಕಾಮಗಾರಿ ತಾತ್ಕಾಲಿಕ ಸ್ಥಗಿತ

ಮುದಿಬೆಟ್ಟ ಕಾವಲಿನಲ್ಲಿ ದೇಗುಲ ನಿರ್ಮಾಣಕ್ಕೆ ಸಿದ್ಧತೆ

• ಪ್ರಜೋದಯ ವರದಿ

ಚನ್ನರಾಯಪಟ್ಟಣ: ತಾಲ್ಲೂಕಿನ ಮುದಿಬೆಟ್ಟ ಕಾವಲು ಗ್ರಾಮದ ಸರ್ವೆ ನಂ.118ರ 12 ಎಕರೆ 5 ಗುಂಟೆ ಸರ್ಕಾರಿ ಬಂಜರು ಭೂಮಿಯನ್ನು ಧಾರ್ಮಿಕ ಹಾಗು ಜಾನುವಾರುಗಳ ಮೇವಿಗಾಗಿ ಗೋಮಾಳವೆಂದು ಮೀಸಲಿಡಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದು ತಹಶೀಲ್ದಾರ್ ಹಾಗು ಸ್ಥಳೀಯರ ನಡುವೆ ಜಟಾಪಟಿ ನಡೆಯಿತು.

ಗ್ರಾಮದ ಸರ್ವೆ ನಂ.118ರಲ್ಲಿ ದೊಡ್ಡ ಬಂಡೆ ಸುತ್ತಲಿನ 12.5 ಎಕರೆ ಬಂಜರು ಭೂಮಿ ಇದ್ದು ಬಂಡೆಯ ಮೇಲೆ ಶ್ರೀ ಆಂಜನೇಯಸ್ವಾಮಿ ದೇಗುಲ ನಿರ್ಮಿಸಲು ಗ್ರಾಮಸ್ಥರು ಸಿದ್ಧತೆ ಮಾಡಿಕೊಂಡಿದ್ದರು. ಈ ವಿಚಾರ ತಿಳಿದು ಸ್ಥಳಕ್ಕೆ ಭೇಟಿ ನೀಡಿದ ತಹಶೀಲ್ದಾರ್ ಬಿ.ಎಸ್. ಶಂಕರಪ್ಪ ಪರಿಶೀಲಿಸಿದರು. ಈ ವೇಳೆ ತಹಶೀಲ್ದಾರ್ ಹಾಗು ಗ್ರಾಮಸ್ಥರ ನಡುವೆ ಮಾತಿನ ಚಕಮಕಿ ನಡೆಯಿತು. ತಹಶೀಲ್ದಾರ್ ಅವರು ಗ್ರಾಮಸ್ಥರಿಗೆ ಸಾಕಷ್ಟು ತಿಳಿ ಹೇಳಿದರು. ಹಿರೀ ಸಾವೆ ಪೊಲೀಸರು ಮಧ್ಯೆ ಪ್ರವೇಶಿಸಿ ವಾತಾವರಣ ತಿಳಿಗೊಳಿಸಿದರು.

ನಮ್ಮೂರು ಮುದಿಬೆಟ್ಟ ಕಾವಲು ನೂರಾರು ವರ್ಷಗಳಿಂದ ಹುಲ್ಲುಗಾವಲು ಪ್ರದೇಶ ವಾಗಿದ್ದು ಜಾನುವಾರುಗಳ ಮೇವಿಗೆ ಆಶ್ರಯವಾಗಿದೆ. ಇತ್ತೀಚಿನ ದಿನಗಳಲ್ಲಿ ಹುಲ್ಲುಗಾವಲು ಪ್ರದೇಶವು ಕೃಷಿ ಜಮೀನಾಗಿ ಪರಿವರ್ತನೆಗೊಂಡಿದ್ದು ಜಾನುವಾರುಗಳ ಮೇವಿಗೆ ಗೋಮಾಳವೇ ಇಲ್ಲವಾಗುತ್ತಿದೆ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದರು.

ಮುದಿಬೆಟ್ಟ ಕಾವಲು, ಉಳ್ಳಾವಳ್ಳಿ, ಹೊಸಹಳ್ಳಿ, ಹೊನ್ನಶೆಟ್ಟಿಹಳ್ಳಿ, ಬೆಂಡೆಕೆರೆ, ಮೆಳ್ಳಹಳ್ಳಿ, ಗೌಡರಹಳ್ಳಿ ಸೇರಿ ಹತ್ತಾರು ಹಳ್ಳಿಗಳು ಈ ವ್ಯಾಪ್ತಿಗೆ ಒಳಪಡಲಿದ್ದು ಸದ್ಯ ಸರ್ವೆ ನಂ.118ರ 12.5 ಎಕರೆ ಪ್ರದೇಶ ಮಾತ್ರ ಉಳಿದಿದೆ. ಈ ಪ್ರದೇಶವನ್ನು ಸಾರ್ವಜನಿಕರ ಹಿತಾಸಕ್ತಿ ಸಲುವಾಗಿ ಉಳಿಸಿ ಕೊಡಿ ಎಂದು ತಹಶೀಲ್ದಾರ್ ಅವರಿಗೆ ಸ್ಥಳೀಯರು ಮನವಿ ಮಾಡಿದರು.

ನೂರಾರು ವರ್ಷಗಳಿಂದ ಈ ಬಂಡೆಯ ಮೇಲೆ ಶ್ರೀ ಮುದಿಬೆಟ್ಟದ ಆಂಜನೇಯ ಸ್ವಾಮಿಯ ಚಿಕ್ಕ ಗುಡಿ ಕಟ್ಟಿಕೊಂಡು ದನ-ಕುರಿ ಮೇಯಿಸುವವರು ಪೂಜಿಸುತ್ತಿದ್ದರು. ಅದನ್ನು ನಾವು ಮುಂದುವರಿಸಿಕೊಂಡು ಬಂದಿದ್ದೇವೆ. ಇತ್ತೀಚಿನ ದಿನಗಳಲ್ಲಿ ಚಿಕ್ಕ ಗುಡಿ ಹಾಳಾಗಿರುವುದರಿಂದ ತೆರವುಗೊಳಿಸಿ ದೇಗುಲ ನಿರ್ಮಿಸಲು ಮುಂದಾಗಿದ್ದೇವೆ. ದಯವಿಟ್ಟು ನಿರ್ಮಿಸಲು ಅವಕಾಶ ಕಲ್ಪಿಸಿಕೊಡಿ ಎಂದು ಮಹಿಳೆಯರು ಕೇಳಿಕೊಂಡರು.

ತಹಶೀಲ್ದಾರ್ ಬಿ.ಎಸ್.ಶಂಕರಪ್ಪ ಅವರು ಮಾತನಾಡಿ, ಈ ಜಾಗವು ಸರ್ಕಾರಿ ಬಂಜರು ಭೂಮಿಯಾಗಿದ್ದು ರಕ್ಷಿಸುವುದು ನಮ್ಮ ಕರ್ತವ್ಯ. ದೇಗುಲ ಹಾಗು ಇತರ ಕಾಮಗಾರಿಗಾಗಿ ಭೂಮಿ ದುರುಪಯೋಗ ಮಾಡಿಕೊಳ್ಳಬಾರದು. ಅಗತ್ಯ ದಾಖಲಾತಿಗಳನ್ನು ಒದಗಿಸಿ ಸರ್ಕಾರ ದಿಂದ ಅನುಮತಿ ಪಡೆಯಬೇಕು. ಅಲ್ಲಿಯವರೆಗೂ ಯಾವುದೇ ಕೆಲಸ ಮಾಡಬಾರದೆಂದು ಸೂಚನೆ ನೀಡಿದರು. » ನಾಲ್ಕನೇ ಪುಟದಲ್ಲಿ

ಧರ್ಮಸ್ಥಳ ಕ್ಷೇತ್ರಕ್ಕೆ ಧಕ್ಕೆಯಾಗದಂತೆ ಎಚ್ಚರ ವಹಿಸಿ

• ಪ್ರಜೋದಯ ವರದಿ

ಹಾಸನ: ಧರ್ಮಸ್ಥಳದಲ್ಲಿ ನಡೆಯುತ್ತಿರುವ ತಲೆಬುರುಡೆ ಉತ್ಖನನ ಪ್ರಕ್ರಿಯೆಯಿಂದ ಕೋಟ್ಯಾಂತರ ಹಿಂದೂಗಳ ಭಾವನೆಗೆ ನೋವುಂಟಾಗಿದೆ. ಎಸ್‌ಐಟಿ ತನಿಖೆಯಿಂದ ಶ್ರೀ ಕ್ಷೇತ್ರಕ್ಕೆ ಧಕ್ಕೆಯಾಗದಂತೆ ಎಚ್ಚರ ವಹಿಸಬೇಕೆಂದು ಶಾಸಕ ಸಿ.ಎನ್.ಬಾಲಕೃಷ್ಣ ಅವರು ಹೇಳಿದರು.

ಸುದ್ದಿಗಾರರೊಂದಿಗೆ ಶುಕ್ರವಾರ ಮಾತನಾಡಿದ ಅವರು, ಅನಾಮಿಕ ನೀಡಿದ ದೂರಿನ ಹಿನ್ನಲೆಯಲ್ಲಿ ಸರ್ಕಾರ ಎಸ್‌ಐಟಿ ರಚಿಸಿ ತಲೆಬುರುಡೆಗಳ ಪತ್ತೆಗೆ ಮುಂದಾಗಿದೆ. ಹಲವು ದಿನಗಳಿಂದ ಕ್ಷೇತ್ರದ ಕುರಿತು ಇಲ್ಲಸಲ್ಲದ ಆರೋಪಗಳು ಕೇಳಿಬರುತ್ತಿದ್ದು ಎಸ್‌ಐಟಿ ಅಧಿಕಾರಿ ಗಳು ಆದಷ್ಟು ಬೇಗ ವರದಿ ಬಿಡುಗಡೆ ಮಾಡಿ ಗೊಂದಲಗಳಿಗೆ ತೆರೆ ಎಳೆಯಬೇಕೆಂದು ಒತ್ತಾಯಿಸಿದರು.

ಧರ್ಮಸ್ಥಳದ ಬಗ್ಗೆ ಕೋಟ್ಯಾಂತರ ಜನರಿಗೆ ಭಕ್ತಿ, ನಂಬಿಕೆ ಮತ್ತು ಗೌರವವಿದೆ. ಇತ್ತೀಚಿನ ಬೆಳವಣಿಗೆಗಳು ಹಿಂದೂ ಭಾವನೆಗಳಿಗೆ ಧಕ್ಕೆ ತರುತ್ತಿವೆ. ಈ ತನಿಖೆಯಿಂದ ಕೇವಲ ಚರ್ಚೆ ಉಂಟಾಗಬಾರದು, ಶೀಘ್ರವಾಗಿ ಮಾಹಿತಿ ನೀಡಬೇಕು. ಯಾವುದೇ ದುರುದ್ದೇಶದಿಂದ ತನಿಖೆ ನಡೆಯಬಾರದೆಂದು ಒತ್ತಾಯಿಸಿದರು.

ಧರ್ಮಸ್ಥಳ ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗ್ಗಡೆಯವರ ಸಾರಥ್ಯದಲ್ಲಿ ಧಾರ್ಮಿಕ ಚಟುವಟಿಕೆಗಳು, ಗ್ರಾಮೀಣಾಭಿವೃದ್ಧಿ ಯೋಜನೆಗಳು, ಹೈನುಗಾರಿಕೆ, ರೈತಾಪಿ ವರ್ಗ ಮತ್ತು ಕೂಲಿ ಕಾರ್ಮಿಕರಿಗೆ ಸಹಾಯ ಮಾಡುವ ಮೂಲಕ ರಾಷ್ಟ್ರಕ್ಕೆ ಶಕ್ತಿ ತುಂಬಿದೆ. ಧರ್ಮಸ್ಥಳಕ್ಕೆ ತನ್ನದೇ ಆದ ಗೌರವವಿದೆ, ಇದು ದೇಶ ಮತ್ತು ಪ್ರಪಂಚಕ್ಕೆ ಗೊತ್ತಿದೆ. ಇತ್ತೀಚಿನ ಗಲಾಟೆ ಮತ್ತು ಗದ್ದಲಗಳು ಭಕ್ತರ ಭಾವನೆಗಳಿಗೆ ಧಕ್ಕೆ ತರುತ್ತಿವೆಯೆಂದರು.

ಕಾನೂನಿಗೆ ತಲೆ ಬಾಗೋಣ

ಅತ್ಯಾಚಾರ ಪ್ರಕರಣದಲ್ಲಿ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ದೋಷಿ ಎಂದು ಜನ ಪ್ರತಿನಿಧಿಗಳ ವಿಶೇಷ ನ್ಯಾಯಾಲಯ ತೀರ್ಪು ನೀಡಿದ್ದು ಕಾನೂನಿಗೆ ಎಲ್ಲರೂ ತಲೆಬಾಗಬೇಕು. ತೀರ್ಪು ಪ್ರಶ್ನಿಸಿ ಮೇಲ್ಮನವಿ ಸಲ್ಲಿಸಲು ಅವಕಾಶವಿದೆ. ಮುಂದಿನ ಕಾನೂನು ಹೋರಾಟದ ಬಗ್ಗೆ ಚರ್ಚೆ ನಡೆಯುತ್ತಿವೆ. ಏನಾಗುತ್ತದೆಂಬುದನ್ನು ಕಾದು ನೋಡಬೇಕೆಂದರು.

ಭಿಕ್ಷೆ ಬೇಡುವ ಸ್ಥಿತಿ ಬಾರದಿರಲಿ

ಪ್ರಸ್ತುತ ಸರ್ಕಾರದಲ್ಲಿ ಶಾಸಕರಿಗೆ ಅನುದಾನ ಸಿಗದೆ ಅಭಿವೃದ್ಧಿ ಕಾಮಗಾರಿಗೆ ಭಾರೀ ಹೊಡೆತ ಬಿದ್ದಿದೆ. ಶ್ರವಣಬೆಳಗೊಳ ಕ್ಷೇತ್ರಕ್ಕೆ ಸೂಕ್ತ ಅನುದಾನ ಬಂದಿಲ್ಲ. ಕಾಂಗ್ರೆಸ್ ಶಾಸಕರಿಗೆ 50 ಕೋಟಿ ರೂ. ಬೇರೆ ಪಕ್ಷದವರಿಗೆ 25 ಕೋಟಿ ರೂ. ಕೊಡುತ್ತೇವೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದರು. ಆದರೆ ಇಲ್ಲಿವರೆಗೆ ಒಂದು ರೂಪಾಯಿ ಬಿಡುಗಡೆ ಆಗಿಲ್ಲ. ರಸ್ತೆ ಗಳೆಲ್ಲಾ ಕೆಸರು ಗದ್ದೆಯಾಗಿವೆ, ಗುಂಡಿ ಮುಚ್ಚಲು ಸಾಧ್ಯವಾಗಿಲ್ಲ. ಜನರ ಬೇಡಿಕೆಗೆ ಸ್ಪಂದಿಸಲು ಆಗುತ್ತಿಲ್ಲವೆಂದು ಬಾಲಕೃಷ್ಣ ಆಕ್ರೋಶ ವ್ಯಕ್ತಪಡಿಸಿದರು.

ಗ್ಯಾರಂಟಿ ಯೋಜನೆಗಳು ಅಭಿವೃದ್ಧಿಗೆ ಪೂರಕ ಆಗಿರಬೇಕಿತ್ತು. ಸಿದ್ದರಾಮಯ್ಯ ಹಿಂದಿನ ಅವಧಿಯಲ್ಲಿ ಮುಖ್ಯಮಂತ್ರಿಯಾಗಿದ್ದಾಗ ಸಾಮಾಜಿಕ ನ್ಯಾಯದಡಿ ಅನುದಾನ ನೀಡಿದ್ದರು. ಆದರೆ ಈಗಿನ ಸರ್ಕಾರದ ಅವಧಿಯಲ್ಲಿ ಏಕೆ ತಾರತಮ್ಯ ಮಾಡುತ್ತಿದ್ದಾರೆಂದು ಪ್ರಶ್ನಿಸಿದರು.

ಶಾಸಕರು ಅನುದಾನಕ್ಕಾಗಿ ಭಿಕ್ಷೆ ಬೇಡುವ ಪರಿಸ್ಥಿತಿಗೆ ತರಬಾರದು. ಎಲ್ಲಾ ಪಕ್ಷದ ಮತದಾರರಿರುವ ನಮ್ಮ ಕ್ಷೇತ್ರದ ಗೌರವವನ್ನು ಉಳಿಸಿಕೊಳ್ಳಲು ಸರ್ಕಾರ ಸಹಕರಿಸಬೇಕು. ರಸಗೊಬ್ಬರ ಕೊರತೆಯ ಸಮಸ್ಯೆಯೂ ತಲೆದೋರುತ್ತಿದೆ. ಮುಂದಿನ 15 ದಿನಗಳಲ್ಲಿ ಗೊಬ್ಬರ ಕೊರತೆ ತೀವ್ರವಾಗಬಹುದು. ಸರ್ಕಾರ ಈ ವಿಚಾರದಲ್ಲಿ ತಾರತಮ್ಯ ಮಾಡುವುದು ಒಳ್ಳೆಯದಲ್ಲ. ಎಲ್ಲಾ ಕ್ಷೇತ್ರಗಳಿಗೂ ಸರಿ ಸಮಾನವಾಗಿ ಅನುದಾನ ನೀಡಬೇಕೆಂದು ಸರ್ಕಾರ ವನ್ನು ಒತ್ತಾಯಿಸುತ್ತೇನೆಂದರು.

ಜಿಲ್ಲೆಗೆ ಕಾಂಗ್ರೆಸ್ ಸರ್ಕಾರದ ಕೊಡುಗೆ ಶೂನ್ಯ: ಸ್ವರೂಪ್

• ಪ್ರಜೋದಯ ವರದಿ

ಹಾಸನ: ಜಿಲ್ಲೆಗೆ ಕಾಂಗ್ರೆಸ್ ಸರ್ಕಾರದ ಅಭಿವೃದ್ಧಿ ಶೂನ್ಯ. ಹಾಸನ ವಿಧಾನ ಸಭಾ ಕ್ಷೇತ್ರಕ್ಕೆ ಒಂದು ಬಿಡಿಗಾಸು ಅನುದಾನ ನೀಡಿಲ್ಲ ಎಂದು ಶಾಸಕ ಹೆಚ್.ಪಿ.ಸ್ವರೂಪ್ ಅವರು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಳೆ ಹೆಚ್ಚಾಗಿ ರಸ್ತೆಗಳು ಹಾಳಾಗಿವೆ. ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಕಾಮಗಾರಿ ಮುಗಿದಿಲ್ಲ. ರೇವಣ್ಣ

ಹಾಕಿಯ ಮಾಂತ್ರಿಕ ಬೆಡಗಿ

ವರ್ಷಗಳ ಹಿಂದಿನ ಕಥೆ, ಸುಮಾರು ಹದಿಮೂರು ವಸಂತಗಳು ಕಳೆದಿವೆ. ಕುಸ್ತಿಯ ಕನಸಿನಲ್ಲಿ ಮುಳುಗಿದ್ದ ಒಬ್ಬ ಸಣ್ಣ ಹುಡುಗಿ, ತನ್ನ ಅಣ್ಣನ ಜೊತೆಗೆ ಕುಸ್ತಿಯ ಅಖಾಡಕ್ಕೆ ಹೋಗುತ್ತ, ಒಲಿಂಪಿಯನ್ ಕುಸ್ತಿಪಟು ಎಂಬ ಕನಸನ್ನು ಕಾಣುತ್ತಿದ್ದಳು. ತನ್ನ ವಯಸ್ಸಿನ ಸಹಪಾಠಿಗಳೊಂದಿಗೆ ಕುಸ್ತಿಯಾಡುತ್ತ, ದೇಹವನ್ನು ಕಸರತ್ತಿನಿಂದ ಕಬ್ಬಿಣದಂತೆ ಕಟ್ಟಿಕೊಳ್ಳುತ್ತಿದ್ದಳು. ಆದರೆ ಒಂದು ದಿನ, ಕುಸ್ತಿಯ ತಾಲೀಮು ಮುಗಿಸಿ, ಅಣ್ಣನ ಕೈಹಿಡಿದು ಮನೆಗೆ ಮರಳುವಾಗ, ಕ್ರೀಡಾಂಗಣದ ಒಂದು ಮೂಲೆಯಲ್ಲಿ ಬಿದ್ದಿದ್ದ ಹಾಕಿ ಸ್ಟಿಕ್ ಆಕೆಯ ಗಮನ ಸೆಳೆಯಿತು. ಕುತೂಹಲದಿಂದ ಅದನ್ನು ಕೈಗೆತ್ತಿಕೊಂಡು, ಆಟಕ್ಕಾಗಿ ಚೆಂಡನ್ನು ಒಡ್ಡಾಡಲಾರಂಭಿಸಿದಳು. ದಿನಗಳು ಕಳೆದಂತೆ, ಕುಸ್ತಿಯ ಮೇಲಿನ ಒಲವು ಕಡಿಮೆಯಾಗಿ, ಹಾಕಿಯ ಜಗತ್ತಿನತ್ತ ಆಕೆಯ ಹೃದಯ ಒಲವು ತೋರಿತು. ಸ್ವತಃ ಕ್ರೀಡಾಪಟುವಾಗಿದ್ದ ತಂದೆ, ಮಗಳ ಈ ಹೊಸ ಆಸಕ್ತಿಗೆ ಎಂದಿಗೂ ಅಡ್ಡಿಯಾಗಲಿಲ್ಲ. ಆ ಹುಡುಗಿಯೇ ಇಂದಿನ ದೀಪಿಕಾ ಸೆಹ್ರಾವತ್, ಪಾಲಿಗ್ರಾಸ್ ಮ್ಯೂಜಿಕ್ ಸ್ಕಿಲ್ ಪ್ರಶಸ್ತಿಯನ್ನು ತನ್ನದಾಗಿಸಿಕೊಂಡವಳು.

ಭಾರತದ ಮಹಿಳಾ ಹಾಕಿ ತಂಡದ ಫಾರ್ವರ್ಡ್ ಆಟಗಾರ್ತಿಯಾಗಿರುವ 21 ವರ್ಷದ ದೀಪಿಕಾ, ಭುವನೇಶ್ವರದಲ್ಲಿ ನಡೆದ ಎಫ್ಐಎಚ್ ಪ್ರೊ ಲೀಗ್‌ನ ಒಂದು ಪಂದ್ಯದಲ್ಲಿ ಮಾಂತ್ರಿಕ ಗೋಲೊಂದನ್ನು ಬಾರಿಸಿದ್ದಳು. ಆ ಗೋಲು, ಈಗ ಪ್ರಶಸ್ತಿಯ ಗೌರವಕ್ಕೆ ಕಾರಣವಾಗಿದೆ. ವಿಶ್ವದ ಬಲಿಷ್ಠ ತಂಡವಾದ ನೆದರ್ಲೆಂಡ್ ವಿರುದ್ಧದ ಆ ಪಂದ್ಯದ 35ನೇ ನಿಮಿಷದಲ್ಲಿ, ದೀಪಿಕಾ ಗಳಿಸಿದ ಗೋಲು ಎಲ್ಲರನ್ನೂ ಬೆರಗಾಗಿಸಿತ್ತು.

ಎಡಗಡೆಯಿಂದ ಚೆಂಡನ್ನು ಡ್ರಿಬಲ್ ಮಾಡುತ್ತ, ಎದುರಾಳಿಯ ಡಿಫೆಂಡರ್‌ಗಳ ಗೋಡೆಯನ್ನು ಚಾಣಾಕ್ಷವಾಗಿ ತಪ್ಪಿಸಿ, ಗೋಲ್‌ಕೀಪರ್‌ನ ಊಹೆಗೂ ಮೀರಿದಂತೆ ಆಕೆ ಗೋಲು ಗಳಿಸಿದ್ದಳು. ಆ ಸಂದರ್ಭದಲ್ಲಿ ಭಾರತ 0–2 ರಿಂದ ಹಿನ್ನಡೆಯಲ್ಲಿತ್ತು. ದೀಪಿಕಾ ಅವರ ಆ ಗೋಲು ತಂಡಕ್ಕೆ ಚೇತರಿಕೆಯ ಉತ್ಸಾಹ ತುಂಬಿತು. ನಂತರ ಭಾರತ 2–2 ರ ಸಮಬಲ ಸಾಧಿಸಿತು, ಆದರೆ ಶೂಟೌಟ್‌ನಲ್ಲಿ ನೆದರ್ಲೆಂಡ್ಸ್ ಗೆಲುವು ಸಾಧಿಸಿತು. ಪಾಲಿಗ್ರಾಸ್ ಸ್ಪರ್ಧೆಯಲ್ಲಿ ದೀಪಿಕಾಗೆ ಸ್ಪೇನ್‌ನ ಪೆಟ್ರಿಶಿಯಾ ಅಲ್ವಾರೇಝ್ ಮತ್ತು ಆಸ್ಟ್ರೇಲಿಯಾದ ಮಹಿಳಾ ತಂಡವು ಗಳಿಸಿದ ಗೋಲುಗಳಿಂದ ತೀವ್ರ ಪೈಪೋಟಿ ಎದುರಾಗಿತ್ತು. ಆದರೂ, ದೀಪಿಕಾ ಎದೆಗುಂದದೆ ಪ್ರಶಸ್ತಿಯನ್ನು ಗೆದ್ದುಕೊಂಡಳು.

ಹರಿಯಾಣದ ಹಿಸಾರ್‌ನ ಈ ಯುವತಿ ಇಂದು ಭಾರತ ತಂಡದ ಪ್ರಮುಖ ಆಟಗಾರ್ತಿಯಾಗಿದ್ದಾಳೆ. ಡ್ರ್ಯಾಗ್ ಮತ್ತು ಫ್ಲಿಕ್‌ನಲ್ಲಿ ಪರಿಣತಳಾದ ದೀಪಿಕಾ, 2022ರ ಹಾಂಗ್ ಝೌ ಏಷ್ಯನ್ ಗೇಮ್ಸ್‌ನಲ್ಲಿ ಕಂಚಿನ ಪದಕ ಗೆದ್ದ ಭಾರತ ತಂಡದ ಭಾಗವಾಗಿದ್ದಳು. 2023ರ ರಾಂಚಿಯಲ್ಲಿ ಮತ್ತು 2024ರ ರಾಜಗೀರ್‌ನಲ್ಲಿ ನಡೆದ ಏಷ್ಯನ್ ಚಾಂಪಿಯನ್‌ಷಿಪ್‌ಗಳಲ್ಲಿ ಚಿನ್ನದ ಪದಕ ಗೆಲ್ಲಲು ಆಕೆಯ ಕೊಡುಗೆ ಅಪಾರವಾಗಿತ್ತು. ಜೂನಿಯರ್ ಏಷ್ಯನ್ ಕಪ್‌ನಲ್ಲಿ ಎರಡು ಬಾರಿ ಚಿನ್ನದ ಪದಕ ಗೆದ್ದ ತಂಡದಲ್ಲೂ ಆಕೆ ಆಡಿದ್ದಳು.

ಭಾರತ ತಂಡದ ಪರ 56 ಪಂದ್ಯಗಳನ್ನಾಡಿರುವ ದೀಪಿಕಾ, 27 ಗೋಲುಗಳನ್ನು ಗಳಿಸಿದ್ದಾಳೆ. ಭವಿಷ್ಯದಲ್ಲಿ ಭಾರತದ ಪ್ರಮುಖ ಫಾರ್ವರ್ಡ್ ಆಟಗಾರ್ತಿಯಾಗಿ ಮಿಂಚುವ ಎಲ್ಲ ಲಕ್ಷಣಗಳನ್ನೂ ಹೊಂದಿರುವ ಈ ಮಾಂತ್ರಿಕ ಬೆಡಗಿ, ತನ್ನ ಸಾಧನೆಯ ಪಯಣವನ್ನು ಯಶಸ್ಸಿನತ್ತ ಮುಂದುವರೆಸುತ್ತಿದ್ದಾಳೆ.

09–8–2025 ದಿನ ಭವಿಷ್ಯ

ಮೇಷ: ಪ್ರತಿ ವ್ಯಕ್ತಿಯನ್ನೂ ಆಲಿಸಿ ನಿಮ್ಮ ಸಮಸ್ಯೆಗಳಿಗೆ ಪರಿಹಾರ ದೊರಕಬಹುದು. ಇನ್ನೂ ಸಂಬಳ ಪಡೆಯದವರು, ಇಂದು ಅವರು ಹಣಕ್ಕಾಗಿ ತುಂಬಾ ಚಿಂತೆ ಮಾಡಬಹುದು ಮತ್ತು ನಿಮ್ಮ ಸ್ನೇಹಿತರಿಂದ ಸಾಲವನ್ನು ಕೇಳಬಹುದು. ಕುಟುಂಬದ ಸದಸ್ಯರ ಅಗತ್ಯಗಳಿಗೆ ಆದ್ಯತೆ ನೀಡಿ. ಒಬ್ಬ ಆಧ್ಯಾತ್ಮಿಕ ನಾಯಕರು ಅಥವಾ ಹಿರಿಯರು ಮಾರ್ಗದರ್ಶನ ಒದಗಿಸುತ್ತಾರೆ.

ವೃಷಭ: ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಗಡಿಬಿಡಯ ನಿರ್ಧಾರಗಳನ್ನು ಕೈಗೊಳ್ಳಬೇಡಿ – ವಿಶೇಷವಾಗಿ ಪ್ರಮುಖ ಹಣಕಾಸಿನ ವ್ಯವಹಾರಗಳ ಬಗ್ಗೆ ಮಾತನಾಡುವಾಗ. ಮಕ್ಕಳು ಹೆಚ್ಚು ಗಮನ ಬಯಸಿದರೂ ಬೆಂಬಲ ಮತ್ತು ಕಾಳಜಿಯಿಂದ ವರ್ತಿಸುತ್ತಾರೆ.

ಮಿಥುನ: ನಿಮ್ಮ ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ. ರಿಯಲ್ ಎಸ್ಟೇಟ್ ಮತ್ತು ಆರ್ಥಿಕ ವ್ಯವಹಾರಗಳಿಗೆ ಒಳ್ಳೆಯ ದಿನ. ಪ್ರಣಯದ ಬಂಧಗಳು ನಿಮ್ಮ ಸಂತೋಷವನ್ನು ಆಸಕ್ತಿಕರವಾಗಿಸುತ್ತವೆ.

ಕರ್ಕಾಟಕ: ಇಂದು ನಿಮ್ಮನ್ನು ಆವರಿಸುವ ಭಾವನಾತ್ಮಕ ಮನಸ್ಥಿತಿಯಿಂದ ನೀವು ಹೊರಬರಲು ಬಯಸಿದರೆ ಹಿಂದಿನದ್ದೆಲ್ಲವನ್ನೂ ಮರೆತುಬಿಡಬೇಕು. ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ಇಂದು ನೀವು ಸಾಲ ಪಡೆಯಬಹುದು. ಚಿಂತಿಸಬೇಡಿ, ನಿಮ್ಮ ದುಃಖ ಇಂದು ಮಂಜುಗಡ್ಡೆಯ ಹಾಗೆ ಕರಗುತ್ತದೆ.

ಸಿಂಹ: ನಿಮ್ಮ ಕುಟುಂಬದ ಜೊತೆ ನಿಮ್ಮ ಸಮಯವನ್ನು ವ್ಯಯಿಸಿ ಪ್ರತ್ಯೇಕತೆ ಮತ್ತು ಒಂಟಿತನದ ಭಾವನೆಯನ್ನು ತೊಡೆದುಹಾಕಿ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ಅದು ನಿಮ್ಮ ಕೈಯಿಂದ ಜಾರಿಹೋಗದಿರಲು ಪ್ರಯತ್ನಿಸಿ. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ. ನೀವು ಸಹಾಯಕ್ಕಾಗಿ ನಿಮ್ಮ ಬಳಿ ಬರುವ ಜನರಿಗೆ ಬದ್ಧತೆ ನೀಡುತ್ತೀರಿ.

ಕನ್ಯಾ: ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ. ಸಂಗಾತಿ ಧೂಮಪಾನ ಬಿಡುವಂತೆ ನಿಮ್ಮನ್ನು ಉತ್ತೇಜಿಸುತ್ತಾರೆ. ಇತರ ಕೆಟ್ಟ ಪರಿಣಾಮಗಳನ್ನು ತೊಡೆದುಹಾಕಲೂ ಇದು ಸರಿಯಾದ ಸಮಯ.

ತುಲಾ: ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ವಿಪರೀತ ತಿನ್ನುವುದು ಮತ್ತು ಹಾರ್ಡ್ ಡ್ರಿಂಕ್‌ಗಳ ಬಗ್ಗೆ ಎಚ್ಚರಿಕೆಯಿಂದಿರಿ. ತಾತ್ಕಾಲಿಕ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ಕಷ್ಟದಲ್ಲಿರುವವರಿಗೆ ಸಹಾಯ ಮಾಡುವ ನಿಮ್ಮ ಸಾಮರ್ಥ್ಯ ನಿಮಗೆ ಗೌರವ ತರುತ್ತದೆ.

ವೃಶ್ಚಿಕ: ಸಣ್ಣ ಸಣ್ಣ ವಿಷಯಗಳು ನಿಮ್ಮ ಮನಸ್ಸು ಕೆಡಿಸಲು ಬಿಡಬೇಡಿ. ಯಾರಾದರೂ ನಿಮ್ಮ ನೆರೆಹೊರೆಯವರು ಇಂದು ನಿಮ್ಮ ಹತ್ತಿರ ಹಣ ಸಾಲ ಕೇಳಲು ಬರಬಹುದು, ಅವರಿಗೆ ಸಾಲ ಕೊಡುವುದಕ್ಕಿಂತ ಮುಂಚೆ ಅವರ ನಂಬಿಕೆಯನ್ನು ಅಗತ್ಯವಾಗಿ ಪರೀಕ್ಷಿಸಿ, ಇಲ್ಲದಿದ್ದರೆ ಹಣದ ನಷ್ಟವಾಗುವ ಸಾಧ್ಯತೆ ಇದೆ. ಇಂದು ಮನೆಯಲ್ಲಿ ಹೆಚ್ಚಿನ ಸಮಯ ನಿದ್ರೆ ಮಾಡಿ ಕಳೆಯುತ್ತೀರಿ.

ಧನು: ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ದಿನದ ಆರಂಭವು ಚೆನ್ನಾಗಿ ಆಗಿದರು, ಸಂಜೆಯ ಸಮಯದಲ್ಲಿ ಯಾವುದೇ ಕಾರಣದಿಂದ ನಿಮ್ಮ ಹಣ ಖರ್ಚಾಗಬಹುದು. ಇದರಿಂದ ನೀವು ತೊಂದರೆಗೊಳಗಾಗಬಹುದು. ಬಲವಾದ ಏನನ್ನಾದರೂ ಮಾಡುವುದು ಮುಂಬರುವ ವಾರದ ಸುಧಾರಣೆಗೆ ಸಹಾಯ ಮಾಡುತ್ತದೆ.

ಮಕರ: ನೀವು ದೈಹಿಕ ಅನಾರೋಗ್ಯದಿಂದ ಚೇತರಿಸಿಕೊಳ್ಳುವ ಸಾಧ್ಯತೆಗಳು ಹೆಚ್ಚಿದ್ದು ಇದು ನಿಮ್ಮನ್ನು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಲು ಸಕ್ರಿಯಗೊಳಿಸುತ್ತದೆ. ಹಣದ ಚಲನೆ ದಿನವಿಡೀ ಮುಂದುವರಿಯುತ್ತದೆ ಮತ್ತು ದಿನದ ಅಂತ್ಯದ ನಂತರ ನೀವು ಉಳಿಸಲು ಸಾಧ್ಯವಾಗುತ್ತದೆ. ನಿಮ್ಮನ್ನು ಅಸ್ತುಷ್ಟಗೊಳಿಸುವ ಬಹಳಷ್ಟು ಜನರಿರುತ್ತಾರೆ.

ಕುಂಭ: ಪ್ರತಿ ವ್ಯಕ್ತಿಯನ್ನೂ ಆಲಿಸಿ ನಿಮ್ಮ ಸಮಸ್ಯೆಗಳಿಗೆ ಪರಿಹಾರ ದೊರಕಬಹುದು. ಕೆಲವು ಪ್ರಮುಖ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತದೆ ಹಾಗೂ ಅವು ನಿಮಗೆ ಹೊಸ ಆರ್ಥಿಕ ಲಾಭ ತರುತ್ತವೆ. ಸ್ನೇಹಿತರು ಸಂತೋಷದ ಸಂಜೆಗಾಗಿ ನಿಮ್ಮನ್ನು ಅವರ ಸ್ಥಳಕ್ಕೆ ಆಮಂತ್ರಿಸುತ್ತಾರೆ. ನೀವು ಪ್ರೀತಿಯಲ್ಲಿ ನಿಧಾನವಾಗಿ ಆದರೆ ಸ್ಥಿರವಾಗಿ ಉರಿಯಬಹುದು.

ಮೀನ: ನಿಮ್ಮ ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ. ಗಡಿಬಿಡಿಯ ನಿರ್ಧಾರಗಳನ್ನು ಕೈಗೊಳ್ಳಬೇಡಿ – ವಿಶೇಷವಾಗಿ ಪ್ರಮುಖ ಹಣಕಾಸಿನ ವ್ಯವಹಾರಗಳ ಬಗ್ಗೆ ಮಾತನಾಡುವಾಗ.

ಭಾರತದ ಗ್ರಂಥಾಲಯ ಪಿತಾಮಹ

ಮಾನವನ ಜ್ಞಾನದಾಹ ಇಂದು ನೆನ್ನೆಯದಲ್ಲ. ಜ್ಞಾನದ ಮೂಲ ಚಿಂತನೆಯಾಗಿದ್ದು, ಜ್ಞಾನ – ವಿಜ್ಞಾನ – ತಂತ್ರಜ್ಞಾನಗಳು ಊಹೆಗೂ ನಿಲುಕದ ವೇಗದಲ್ಲಿ ಬೆಳೆಯುತ್ತಿವೆ. ಒಂದೆಡೆ ಬಡತನ, ಜ್ಞಾನ ಪಡೆಯಲು ಅಡ್ಡಿಯಾಗುತ್ತಿರುವುದು ಇಂದು ನಿನ್ನೆಯ ಸಮಸ್ಯೆಯೇನಲ್ಲ ಎಂಬ ವಿಷಯವು ನಮ್ಮೆಲ್ಲರಿಗೂ ತಿಳಿದೇ ಇದೆ. ಇಂತಹ ಸಂದರ್ಭದಲ್ಲಿ ನಮಗೆ ಜ್ಞಾನ ಪೂರೈಕೆ ಮಾಡುವ ಅರಿವಿನ ದೀವಿಗೆಗಳೆಂದರೆ ಗ್ರಂಥಾಲಯಗಳು. ಇಷ್ಟಪಟ್ಟು ಓದಲು ಬರುವವರಿಗೆ, ಜ್ಞಾನದ ಹೊಸ ಬೆಳಕನ್ನು ನೀಡುವ ಅಕ್ಷಯ ಭಂಡಾರಗಳು.



ವಿಶ್ವದಲ್ಲಿ ಜ್ಞಾನಕ್ಕಿಂತ ಮಿಗಿಲಾದುದು ಯಾವುದೂ ಇಲ್ಲ. ಇದನ್ನೇ ನಹೀ ಜ್ಞಾನೇನ ಸದೃಶಂ ಎಂದು ಹೇಳಲಾಗಿದೆ. ಜ್ಞಾನವು ಯಾವಾಗಲೂ ಹರಿಯುತ್ತಿರುವ ನದಿಯ ನೀರಿನಂತಿರಬೇಕು. ಜ್ಞಾನವಾಹಿನಿಯು ಯಾವಾಗಲೂ ಒಬ್ಬರಿಂದ ಇನ್ನೊಬ್ಬರಿಗೆ ಪ್ರವಹಿಸುತ್ತಿರುತ್ತದೆ. ಮುಚ್ಚಿಟ್ಟ ಜ್ಞಾನ ಕೊಳೆಯುತ್ತದೆ. ಬಿಚ್ಚಿಟ್ಟ ಜ್ಞಾನ ಹೊಳೆಯುತ್ತದೆ. ಆಧುನಿಕ ಸ್ಪರ್ಧಾತ್ಮಕ ಜಗತ್ತಿನಲ್ಲಿ ಬದುಕುತ್ತಿರುವ ನಾವು ಪ್ರತಿ ಹಂತದಲ್ಲೂ ಸ್ಪರ್ಧೆಯನ್ನು ಕಾಣುತ್ತಿದ್ದೇವೆ. ಜೀವನ ನಡೆಸಲು ಸ್ಪರ್ಧೆಯನ್ನು ಅನಿವಾರ್ಯವಾಗಿ ಎದುರಿಸಬೇಕಾಗಿದೆ. ಇದಕ್ಕಾಗಿ ಸ್ಪರ್ಧಾಜ್ಞಾನ ಅತ್ಯಾವಶ್ಯಕವಾಗಿದೆ. ಮಾನವನ ಜ್ಞಾನದಾಹ ಇಂದು ನೆನ್ನೆಯದಲ್ಲ, ಜ್ಞಾನದ ಮೂಲ ಚಿಂತನೆಯಾಗಿದ್ದು, ಜ್ಞಾನ – ವಿಜ್ಞಾನ – ತಂತ್ರಜ್ಞಾನಗಳು ಊಹೆಗೂ ನಿಲುಕದ ವೇಗದಲ್ಲಿ ಬೆಳೆಯುತ್ತಿವೆ. ಒಂದೆಡೆ ಬಡತನ, ಜ್ಞಾನ ಪಡೆಯಲು ಅಡ್ಡಿಯಾಗುತ್ತಿರುವುದು ಇಂದು ನಿನ್ನೆಯ ಸಮಸ್ಯೆಯೇನಲ್ಲ ಎಂಬ ವಿಷಯವು ನಮ್ಮೆಲ್ಲರಿಗೂ ತಿಳಿದೇ ಇದೆ. ಇಂತಹ ಸಂದರ್ಭದಲ್ಲಿ ನಮಗೆ ಜ್ಞಾನ ಪೂರೈಕೆ ಮಾಡುವ ಅರಿವಿನ ದೀವಿಗೆಗಳೆಂದರೆ ಗ್ರಂಥಾಲಯಗಳು. ಇಷ್ಟಪಟ್ಟು ಓದಲು ಬರುವವರಿಗೆ, ಜ್ಞಾನದ ಹೊಸ ಬೆಳಕನ್ನು ನೀಡುವ ಅಕ್ಷಯ ಭಂಡಾರಗಳು. ಜ್ಞಾನವು ವಿವಿಧ ಶಾಖೆಗಳಲ್ಲಿ ಪ್ರವಹಿಸುತ್ತಿರುತ್ತದೆ. ಮಾನವನಿಗೆ ಪ್ರಜ್ಞೆ ಬಂದ ಕಾಲದಿಂದ ಇಂದಿನವರೆಗೂ ಜ್ಞಾನ ಪ್ರಸರಣ ಕಾರ್ಯ ನಿಂತಿಲ್ಲ. ನಿಲ್ಲುವುದೂ ಇಲ್ಲ. ಜ್ಞಾನವು ಅಮೂರ್ತ ಸ್ವರೂಪದ್ದಾಗಿದ್ದು ವಿಭಿನ್ನವಾದ ಮತ್ತು ವಿಶಿಷ್ಟವಾದ ಪರಿಕಲ್ಪನೆಯಾಗಿದೆ. ಜ್ಞಾನ ಪ್ರಸರಣಾ ಕಾರ್ಯದಲ್ಲಿ ಭಾಗವಹಿಸುವವರು ಯಾರು ಎಂಬುದು ಒಂದು ಪ್ರಶ್ನೆಯಾಗಿದೆ. ಪೋಷಕರು, ಸ್ನೇಹಿತರು, ಶಿಕ್ಷಕರು, ತಜ್ಞರು, ಉಪನ್ಯಾಸಕರು, ತತ್ವಜ್ಞಾನಿಗಳು, ಚಿಂತಕರು, ಮಾರ್ಗದರ್ಶಕರು, ಸಂಗೀತ ವಿದ್ವಾಂಸರು, ಚಿತ್ರಕಲಾವಿದರು, ಪತ್ರಕರ್ತರು, ಕಥೆಗಾರರು, ನಾಟಕಕಾರರು, ಕಾದಂಬರಿಕಾರರು, ಕವಿಗಳು, ಗ್ರಂಥಪಾಲಕರು, ಪತ್ರಿಕೆಗಳು, ಪುಸ್ತಕಗಳು, ಶಾಲಾ – ಕಾಲೇಜುಗಳು, ವಿಶ್ವವಿದ್ಯಾಲಯಗಳು, ಗ್ರಂಥಾಲಯಗಳು ಮುಂತಾದವು. ವ್ಯಕ್ತಿಯ ಜ್ಞಾನವನ್ನು ವಿಸ್ತರಿಸಲು ಗ್ರಂಥಾಲಯ ಬಹಳ ಉಪಯುಕ್ತ ಮಾಧ್ಯಮವಾಗಿದೆ. ಹೆಚ್ಚಿನ ವರ್ಗದ ವ್ಯಕ್ತಿಗಳಿಗೆ ಆಸಕ್ತಿ ಅಥವಾ ಅಗತ್ಯವಿರುವ ಎಲ್ಲಾ ಪುಸ್ತಕಗಳನ್ನು ಖರೀದಿಸಲು ಸಾಧ್ಯವಾಗುವುದಿಲ್ಲ ಮತ್ತು ಹಣದ ಅನುಪಸ್ಥಿತಿಯಲ್ಲಿ ಅವನು ಜ್ಞಾನ ಮತ್ತು ಶಿಕ್ಷಣದಿಂದ ವಂಚಿತನಾಗಿರುತ್ತಾನೆ. ಆದರೆ ಗ್ರಂಥಾಲಯದ ಮೂಲಕ ಎಲ್ಲಾ ರೀತಿಯ ಪುಸ್ತಕಗಳು ಮತ್ತು ಅವುಗಳ ಜ್ಞಾನವನ್ನು ಸುಲಭವಾಗಿ ಬಳಸಿಕೊಳ್ಳಬಹುದು. ಪುಸ್ತಕಗಳು ಮಾನವರ ಉತ್ತಮ ಸ್ನೇಹಿತರು ಎಂದು ಹೇಳಲಾಗುತ್ತದೆ. ಒಬ್ಬ ವ್ಯಕ್ತಿಯು ತನ್ನ ಸ್ನೇಹಿತನೊಂದಿಗೆ ಪ್ರತಿ ಕ್ಷಣದಲ್ಲಿ, ಪ್ರತಿ ಸಮಸ್ಯೆಯಲ್ಲಿ ಸಹಕಾರಿ ಯಾಗುತ್ತಾನೆ. ಅದೇ ರೀತಿಯಲ್ಲಿ ಪುಸ್ತಕಗಳು ಮನುಷ್ಯನಿಗೆ ಪ್ರತಿಯೊಂದು ಕಷ್ಟಕರ ಪ್ರಶ್ನೆ, ಪರಿಸ್ಥಿತಿಯ ಪರಿಹಾರವನ್ನು ಪುಸ್ತಕಗಳಲ್ಲಿ ತೆರೆ ಮಾಡಲಾಗಿದೆ.

ಗ್ರಂಥಾಲಯ ಪದಾರ್ಥ: ಕನ್ನಡದ ಗ್ರಂಥಾಲಯ ಎಂದು ಕರೆಯಲಾಗುವ ಪದವು ಇಂಗ್ಲಿಷ್ ಭಾಷೆಯ ಲೈಬ್ರರಿ ಪದಕ್ಕೆ ಸಮನಾಗಿದೆ. ''ಗ್ರಂಥಗಳ'' + ''ಆಲಯ'', ಇಲ್ಲಿ ಆಲಯ ಎಂದರೆ ''ಸ್ಥಳ''. ಅಂತೆಯೇ, ಗ್ರಂಥಾಲಯದ ಅರ್ಥ ''ಪುಸ್ತಕಗಳ ಸ್ಥಳ''. ಗ್ರಂಥಾಲಯದಲ್ಲಿ ವಿವಿಧ ರೀತಿಯ ಪುಸ್ತಕಗಳ ಸಂಗ್ರಹವಿದೆ. ಇಲ್ಲಿ ಪ್ರತಿಯೊಬ್ಬ ವಯಸ್ಸಿನ ವ್ಯಕ್ತಿಗೂ ಅವರ ಆಸಕ್ತಿಗೆ ಅನುಗುಣವಾಗಿ ಪುಸ್ತಕಗಳು ಲಭ್ಯವಿರುತ್ತವೆ.

ಮನುಷ್ಯನ ಜೀವನದಲ್ಲಿ ಪುಸ್ತಕಗಳು ಪ್ರಮುಖ ಪಾತ್ರ ವಹಿಸುತ್ತದೆ. ಜ್ಞಾನಾಭಿವೃದ್ಧಿಗೆ ಮತ್ತು ಅಮೂಲ್ಯವಾದ ಸಮಯದ ಸದುಪಯೋಗಕ್ಕೆ ಗ್ರಂಥಾಲಯಗಳು ಬಹಳ ಮುಖ್ಯ ಎನಿಸುತ್ತದೆ. ಗ್ರಂಥಾಲಯವು ಪೀಳಿಗೆಯಿಂದ ಪೀಳಿಗೆಗೆ ಜ್ಞಾನವನ್ನು ಹಂಚುವ ಉನ್ನತ ಕಾರ್ಯವನ್ನು ಮಾಡುತ್ತಿವೆ. ಪುಸ್ತಕಗಳು ಒಳ್ಳೆಯ ಗೆಳೆಯರಿದ್ದಂತೆ ಹಾಗೂ ಗುರುವಿದ್ದಂತೆ. ಮಾನವನ ಮನಸ್ಸಿನ ವಿಕಾಸಕ್ಕೆ ಪುಸ್ತಕಗಳು ಅವಶ್ಯಕವಾಗಿದೆ. ಪ್ರತಿಯೊಂದು ವಿಷಯಗಳಿಗೆ ಸಂಬಂಧಪಟ್ಟಂತಹ ಪುಸ್ತಕಗಳು ಗ್ರಂಥಾಲಯದಲ್ಲಿ ದೊರೆಯುತ್ತದೆ. ಮಾಸಪತ್ರಿಕೆಗಳು, ವಾರಪತ್ರಿಕೆಗಳು, ದಿನಪತ್ರಿಕೆಗಳು ಸಿಗುತ್ತದೆ. ಪುಸ್ತಕ ಮನುಷ್ಯನ ಗೆಳೆಯ, ಜ್ಞಾನವನ್ನು ನೀಡುವ ಕಾಮಧೇನುವಿನಂತೆ, ಮಾರ್ಗದರ್ಶಕನಿದ್ದಂತೆ. ಮಾಹಿತಿ ಪಡೆಯಲು ಪುಸ್ತಕ ಭಂಡಾರಗಳು ಬಹಳ ಮುಖ್ಯವಾಗಿದೆ. ಗ್ರಂಥಾಲಯಗಳಲ್ಲಿ ಬೇರೆ ಬೇರೆ ಭಾಷೆಯ ಪುಸ್ತಕಗಳು ದೊರೆಯುತ್ತದೆ. ಸಂಶೋಧಕರಿಗೆ, ಲೇಖಕರಿಗೆ, ಶಿಕ್ಷಕರಿಗೆ, ವಿದ್ಯಾರ್ಥಿಗಳಿಗೆ ಹೀಗೆ ಎಲ್ಲಾ ವರ್ಗದ ಜನರಿಗೂ ಗ್ರಂಥಾಲಯಗಳು ಬೇಕು. ಗ್ರಂಥಾಲಯದಲ್ಲಿ ಬಡವ–ಶ್ರೀಮಂತ, ಚಿಕ್ಕವ–ದೊಡ್ಡವ, ಎಂಬ ಭೇದಭಾವ ಇಲ್ಲ. ಓದು ನಮ್ಮ ವ್ಯಕ್ತಿತ್ವ ವಿಕಸನಕ್ಕೆ ಸಹಕಾರಿಯಾಗಿದೆ. ಎಲ್ಲಾ ಪುಸ್ತಕವನ್ನು ಹಣಕೊಟ್ಟುಕೊಂಡುಕೊಳ್ಳುವುದು ಅಸಾಧ್ಯ. ಆದರೆ ಗ್ರಂಥಾಲಯ ಈ ಕೊರತೆಯನ್ನು ನೀಗಿಸುತ್ತದೆ.

**ಎಸ್. ಆರ್.

ಚುನಾವಣೆ ಆಯೋಗದ ಮೇಲೆ ಸುಳ್ಳಿನ ಸುರಿಮಳೆ | ಮುಳ್ಳನ್ನು ಮುಳ್ಳಿನಿಂದಲೇ ತೆಗೆಯಿರಿ

ಜನತಂತ್ರಕ್ಕೆ ನೇಣು ಬಿಗಿಯುವ ದೂರ್ತ ಹುನ್ನಾರ

• ಪ್ರಜೋದಯ ವರದಿ

ಬೆಂಗಳೂರು: 2024ರ ಲೋಕಸಭೆ ಚುನಾವಣೆಯಲ್ಲಿ ಮತಗಳ್ಳತನವಾಗಿದೆ. ಆ ಬಗ್ಗೆ ನಮ್ಮ ಬಳಿ ಬ್ಲ್ಯಾಕ್ ಆ್ಯಂಡ್ ವೈಟ್ ಸಾಕ್ಷ್ಯಗಳಿವೆ ಅಂತಾ ವಿಪಕ್ಷ ನಾಯಕ ರಾಹುಲ್ ಗಾಂಧಿ ಗಂಭೀರ ಆರೋಪ ಮಾಡಿದ್ದರು. ಅಷ್ಟೇ ಅಲ್ಲದೆ ಬಿಜೆಪಿ ಜೊತೆ ಚುನಾವಣಾ ಆಯೋಗ ಶಾಮೀಲಾಗಿದೆ ಎಂದಿದ್ದರು. ಈ ವಿಚಾರವಾಗಿ ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು, ಚುನಾವಣೆ ಆಯೋಗದ ಮೇಲೆ ಸುಳ್ಳಿನ ಸುರಿಮಳೆ ಜನತಂತ್ರಕ್ಕೆ ನೇಣು ಬಿಗಿಯುವ ದೂರ್ತ ಹುನ್ನಾರ. ಅಮೃತ ಕಾಲದ ಪ್ರಜಾಪ್ರಭುತ್ವಕ್ಕೆ ವಿಷವಿಕ್ಕುವ ಘೋರ ಷಡ್ಯಂತ್ರ ಎಂದು ಕಿಡಿಕಾರಿದ್ದಾರೆ.

ಮುಳ್ಳನ್ನು ಮುಳ್ಳಿನಿಂದಲೇ ತೆಗೆಯಿರಿ: ಈ ಬಗ್ಗೆ ಟ್ವೀಟ್ ಮಾಡಿರುವ ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ,

ಸಾಂವಿಧಾನಿಕ ಸಂಸ್ಥೆಗಳ ಮೇಲೆ ಅಸತ್ಯದ ಆರೋಪದ ಮೂಲಕ ಅನುಮಾನದ ಪ್ರಯೋಜನ ಪಡೆಯುವ ಕಿಡಿಗೇಡಿ ಪಿತೂರಿ. ಚುನಾವಣೆಯಲ್ಲಿ ಎಸಗಿದ ಪಾಪವನ್ನು ಸುಳ್ಳಿನಿಂದ ಮುಚ್ಚಿಕೊಳ್ಳುವ ಗೂಬೆಲ್ ರಾಜಕಾರಣ ಎಂದು ವಾಗ್ದಾಳಿ ಮಾಡಿದ್ದಾರೆ.

ಮತಗಳ್ಳತನಕ್ಕೆ ಒಂದೇ ಮದ್ದು. ಮತದಾರರ ಗುರುತಿನ ಚೀಟಿಗೆ ಆಧಾರ್ ಸಂಖ್ಯೆ ಲಿಂಕ್ ಮಾಡುವುದು. ಅಷ್ಟು ಮಾಡಿದರೆ ಮತಗಳ್ಳರ ಆಟಕ್ಕೆ ಅಂಕೆ ಬೀಳುವುದು ಗ್ಯಾರಂಟಿ. ಕೇಂದ್ರೀಯ ಚುನಾವಣೆ ಆಯೋಗಕ್ಕೆ ನನ್ನ ಮನವಿ ಅಥವಾ ಒತ್ತಾಯ ಇಷ್ಟೇ. ಮುಳ್ಳನ್ನು ಮುಳ್ಳಿನಿಂದಲೇ ತೆಗೆಯಿರಿ ಎಂದಿದ್ದಾರೆ.

ಐಶ್ವರ್ಯ ಪ್ರಾಪ್ತಿಸಲಿ: ನಿಖಿಲ್ ಕುಮಾರಸ್ವಾಮಿ

ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಕೂಡ ಟ್ವೀಟ್ ಮಾಡಿದ್ದು, ಶ್ರೀ ರಾಹುಲ್ ಗಾಂಧಿ ಅವರೇ, ನಮ್ಮ ಕರ್ನಾಟಕಕ್ಕೆ ಸ್ವಾಗತ. ವರಮಹಾಲಕ್ಷ್ಮಿ ಹಬ್ಬದ ಶುಭಾಶಯಗಳು. ಕಳೆದ 3 ವರ್ಷದಲ್ಲಿ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ 3 ಲಕ್ಷ ಕೋಟಿ ರೂ. ಸಾಲ ಮಾಡಿದೆ. ರಾಜ್ಯದಲ್ಲಿ ಸಾಲದ ಪ್ರಮಾಣ 24.91% ಆಗಿದೆ ಎಂದಿದ್ದಾರೆ.

ನಿಮ್ಮ ಗ್ಯಾರಂಟಿ ಯೋಜನೆಗೆ ಪ್ರತಿ ವರ್ಷ ಬೇಕಾಗಿರುವುದು 55 ಸಾವಿರ ಕೋಟಿ ರೂ., ಕಳೆದ 3 ವರ್ಷದಿಂದ ನಿಮ್ಮ ಸರ್ಕಾರ ಮಾಡುತ್ತಿರುವ ಸಾಲ ವರ್ಷಕ್ಕೆ 1 ಲಕ್ಷ ಕೋಟಿ ರೂ. ನಿಮ್ಮ ಶಾಸಕರೇ ಅಭಿವೃದ್ಧಿಗೆ ಹಣವಿಲ್ಲ ಎಂದು ಹೇಳುತ್ತಿದ್ದಾರೆ. ತಾಯಿ ಮಹಾಲಕ್ಷ್ಮಿಯು ಹಣಕಾಸು ಸಂಕಷ್ಟದಲ್ಲಿರುವ ರಾಜ್ಯ ಸರ್ಕಾರಕ್ಕೆ ಸರ್ವಐಶ್ವರ್ಯ ಪ್ರಾಪ್ತಿಸಲಿ ಎಂದು ಪ್ರಾರ್ಥನೆ ಮಾಡೋಣ ಎಂದು ಕಿಡಿಕಾರಿದ್ದಾರೆ.

ನಿಮ್ಮಜ್ಜಿ ಮತಗಳ್ಳತನ ಮಾಡಿ ಗೆದ್ದಿರಲಿಲ್ಲವೇ..?

ಬೆಂಗಳೂರು: ಮತಗಳ್ಳತನ ಆರೋಪ ಸಂಬಂಧ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಕಾಂಗ್ರೆಸ್ ಶುಕ್ರವಾರ ಹಮ್ಮಿಕೊಂಡಿದ್ದ ಬೃಹತ್ ಪ್ರತಿಭಟನಾ ಸಮಾವೇಶದ ಬಗ್ಗೆ ರಾಹುಲ್‌ಗಾಂಧಿ ಅವರನ್ನು ಗುರಿಯಾಗಿಸಿ ಬಿಜೆಪಿ ಟೀಕಾಪ್ರಹಾರ ನಡೆಸಿದೆ.

ಈ ಕುರಿತು ಎಕ್ಸ್‌ನಲ್ಲಿ ಸರಣಿ ಪೋಸ್ಟ್‌ಗಳನ್ನು ಬಿಜೆಪಿ ಹಂಚಿಕೊಂಡಿದೆ. ನಿಮ್ಮ ಅಜ್ಜಿ ಇಂದಿರಾಗಾಂಧಿ ಮತಗಳ್ಳತನ ಮಾಡಿ ಚುನಾವಣೆಯಲ್ಲಿ ಗೆದ್ದಿರಲಿಲ್ಲವೇ? ಎಂದು ರಾಹುಲ್ ಗಾಂಧಿ ಅವರನ್ನು ಕೆಣಕಿದೆ. ಮತಗಳ್ಳತನ ಮಾಡಿ ಚುನಾವಣೆಯಲ್ಲಿ ಗೆದ್ದ ಅಜ್ಜಿ ಇಂದಿರಾಗಾಂಧಿ ತಮ್ಮ ಮತಗಳ್ಳತನ ಅಲಹಾಬಾದ್ ಕೋರ್ಟ್‌ನಲ್ಲಿ ಸಾಬೀತಾಗಿದ್ದಕ್ಕಾಗಿ ಭಾರತದ ಮೇಲೆ ತುರ್ತು ಪರಿಸ್ಥಿತಿ ಹೇರಿದರು. ಇಂದು ಚುನಾವಣೆಯಲ್ಲಿ ಹೀನಾಯವಾಗಿ ಸೋತಿರುವ ಮೊಮ್ಮಗ ರಾಹುಲ್ ಗಾಂಧಿ ತಮ್ಮ ಸೋಲಿಗೆ ಮತಗಳ್ಳತನ ಕಾರಣ ಎಂಬ ಸುಳ್ಳನ್ನಿದ್ದಿ ಹರಿಬಿಟ್ಟು ಜನರ ದಿಕ್ಕು ತಪ್ಪಿಸುತ್ತಿದ್ದಾರೆ ಎಂದು ಆರೋಪಿಸಿದೆ.

ಕೆ.ಆಲದಹಳ್ಳಿಯಲ್ಲಿ ಮಣ್ಣಿನ ಮಾದರಿ ಅಭಿಯಾನ

• ಪ್ರಜೋದಯ ವರದಿ

ಹಾಸನ: ಕಾರೆಕೆರೆ ಕೃಷಿ ಮಹಾವಿದ್ಯಾಲಯದ ಬಿಎಸ್‌ಸಿ ಅಂತಿಮ ವರ್ಷದ ವಿದ್ಯಾರ್ಥಿಗಳು ತಾಲ್ಲೂಕಿನ ಕೆ. ಆಲಹದಳ್ಳಿಯಲ್ಲಿ ಹಮ್ಮಿಕೊಂಡಿರುವ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರದ ಅಂಗವಾಗಿ ಮಣ್ಣಿನ ಮಾದರಿ ಅಭಿಯಾನ ಹಮ್ಮಿಕೊಂಡಿದ್ದರು.

ಮಹಾವಿದ್ಯಾಲಯದ ಮಣ್ಣು ವಿಜ್ಞಾನ ಮತ್ತು ಕೃಷಿ ರಸಾಯನಶಾಸ್ತ್ರ ಸಹಾಯಕ ಪ್ರಾಧ್ಯಾಪಕ ಡಾ. ಎಸ್. ಎನ್. ಚಿಕ್ಕರಾಜು, ಕೃಷಿ ವಿಸ್ತರಣಾ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ವಿನೋದ ಶಂಕರ ನಾಯ್ಕ, ಎಂಸಿಎಫ್ ಕಂಪನಿಯ ಸಮರ್ಥ್ ಹಾಗು ಉತ್ತಮ್ ಉಪನ್ಯಾಸ ನೀಡಿದರು. ಶಿಬಿರಾರ್ಥಿಗಳಾದ ರಂಜಿತಾ ಹಾಗು ತ್ರಿವೇಣಿ ಕಾರ್ಯಕ್ರಮ ನಡೆಸಿಕೊಟ್ಟರು.

ಮಣ್ಣಿನ ಫಲವತ್ತತೆ ಮತ್ತು ಅದರ ಪ್ರಾಮುಖ್ಯತೆ, ಮಣ್ಣು ಪರೀಕ್ಷೆ ಹಾಗು ಕಾರ್ಯ ವಿಧಾನ, ಮಣ್ಣು ಪರೀಕ್ಷೆಗೆ ಯೋಗ್ಯವಾದ ಮಣ್ಣು ಹಾಗು ಅದನ್ನು ತೆಗೆದುಕೊಳ್ಳಬೇಕಾದ ಸ್ಥಳದ ಬಗ್ಗೆ ರೈತರಿಗೆ ಮಾಹಿತಿ ನೀಡಲಾಯಿತು.

ಸಮರ್ಥ್ ಅವರು ಮಾತನಾಡಿ, ಎಂಸಿಎಫ್ ಕಂಪನಿಯವರ ಪರವಾಗಿ ಗ್ರಾಮಸ್ಥರಿಗೆ ಉಚಿತವಾಗಿ ಮಣ್ಣು ಪರೀಕ್ಷೆ ಮಾಡಿ ಪ್ರಮಾಣ ಪತ್ರ ನೀಡುವುದಾಗಿ ಹೇಳಿದರು. ಮಣ್ಣಿನ ಮಾದರಿಯ ಸಂಗ್ರಹಣೆಯನ್ನು ಪ್ರಾತ್ಯಕ್ಷಿಕೆ ಮೂಲಕ ರೈತರಿಗೆ ತೋರಿಸಲಾಯಿತು.

ಜಿಲ್ಲಾದ್ಯಂತ ವರಮಹಾಲಕ್ಷ್ಮಿ ಹಬ್ಬದ ಸಂಭ್ರಮ

• ಪ್ರಜೋದಯ ವರದಿ

ಹಾಸನ: ಹಿಂದೂಗಳ ಧಾರ್ಮಿಕ ಸಂಸ್ಕೃತಿಯ ಪ್ರತೀಕವಾದ ವರಮಹಾಲಕ್ಷ್ಮಿ ಹಬ್ಬವನ್ನು ನಗರ ಸೇರಿ ಜಿಲ್ಲಾದ್ಯಂತ ಶುಕ್ರವಾರ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಮಹಿಳೆಯರು ಒಟ್ಟಾಗಿ ಪೂಜೆ ಪುನಸ್ಕಾರದಲ್ಲಿ ಭಾಗವಹಿಸುವ ಅಪರೂಪದ ಹಬ್ಬ ಇದಾಗಿದ್ದು ಮನೆಗಳಲ್ಲಿ ವಿಶೇಷ ಧಾರ್ಮಿಕ ಕೈಂಕರ್ಯ ನೆರವೇರಿದವು.

ಮಹಾಲಕ್ಷ್ಮಿಗೆ ಮಖವಾಡ ಹಾಕಿ ಶೃಂಗಾರ ಮಾಡಿ ದೇವಿಗೆ ಮಡಿ ಸೀರೆ, ಹೂವಿನಿಂದ ಅಲಂಕರಿಸಲಾಯಿತು. ವಿವಿಧ ಬಗೆಯ ಖಾದ್ಯ ತಯಾರಿಸಿ ಲಕ್ಷ್ಮಿದೇವಿಗೆ ನೈವೇದ್ಯ ಸಲ್ಲಿಸಲಾಯಿತು. ಲಕ್ಷ್ಮೀ ವ್ರತ, ಪಾರಾಯಣ ಮಾಡಲಾಯಿತು.

ಪ್ರಧಾನಿ ಮೋದಿಗೆ ಚೀನಾ ಆತ್ಮೀಯ ಸ್ವಾಗತ

ಬೀಜಿಂಗ್: ಚೀನಾದ ಟಿಯಾಂಜಿನ್ ನಗರದಲ್ಲಿ ನಡೆಯುತ್ತಿರುವ ಶಾಂಘೈ ಸಹಕಾರ ಶೃಂಗಸಭೆ (ಎಸ್‌ಸಿಒ)ಯಲ್ಲಿ ಭಾಗವಹಿಸಲು, ಭಾರತದ ಪ್ರಧಾನ ಮಂತ್ರಿ ನರೇಂದ್ರ ಮೋದಿ ಇದೇ ಆ.31ರಂದು ಚೀನಾಗೆ ಪ್ರಯಾಣ ಬೆಳೆಸಲಿದ್ದಾರೆ.

ಈ ಮಧ್ಯೆ ಎಸ್‌ಸಿಒ ಶೃಂಗಸಭೆಯಲ್ಲಿ ಭಾಗವಹಿಸಲು ಟಿಯಾಂಜಿನ್‌ಗೆ ಭೇಟಿ ನೀಡುತ್ತಿರುವ ಭಾರತದ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರಿಗೆ ಚೀನಾ ಆತ್ಮೀಯ ಸ್ವಾಗತ ಕೋರಿದೆ. ಈ ಕುರಿತು ಅಧಿಕೃತ ಹೇಳಿಕೆಯನ್ನು ಬಿಡುಗಡೆ ಮಾಡಿರುವ ಚೀನಾದ ವಿದೇಶಾಂಗ ಸಚಿವಾಲಯದ ವಕ್ತಾರ ಗುವೊ ಜಿಯಾಕುನ್, ಚೀನಾಗೆ ಬರುತ್ತಿರುವ ಭಾರತದ ಪ್ರಧಾನಿ ಮೋದಿ ಅವರಿಗೆ ನಾವು ಆತ್ಮೀಯ ಸ್ವಾಗತ ಕೋರುತ್ತೇವೆ ಎಂದು ಹೇಳಿದ್ದಾರೆ.

ದೇವಾಂಗ ಸಂಘದಿಂದ ವರಮಹಾಲಕ್ಷ್ಮೀ ಹಬ್ಬ ಆಚರಣೆ

• ಪ್ರಜೋದಯ ವರದಿ

ಬೇಲೂರು: ಪಟ್ಟಣದ ದೇವಂಗ ಬೀದಿಯಲ್ಲಿರುವ ಚೌಡೇಶ್ವರಿ ದೇಗುಲದಲ್ಲಿ ವಿಶೇಷ ಪೂಜೆ ಮತ್ತು ಅಲಂಕಾರ ಮಾಡಲಾಗಿತ್ತು. ಸಾವಿರಾರು ಭಕ್ತರು ದೇಗುಲಕ್ಕೆ ಆಗಮಿಸಿ ದೇವಿಯ ದರ್ಶನ ಪಡೆದು ಪುನೀತರಾದರು.

ಈ ಸಂದರ್ಭದಲ್ಲಿ ಮಾತನಾಡಿದ ದೇಗುಲ ಸಮಿತಿಯ ಅಧ್ಯಕ್ಷ ವಸಂತ್ ಶೇಖರ್, ದೇಗುಲವನ್ನು ಹೂವು, ತೋರಣಗಳಿಂದ ಸಿಂಗರಿಸಿ, ದೇವಿಗೆ ವಿಶೇಷ ಅಲಂಕಾರ ಮಾಡಲಾಗಿದೆ. ವಿಶೇಷವೆಂದರೆ ಕೊಲ್ಲಾಪುರದಲ್ಲಿ ದೇವಿಗೆ ಅಲಂಕಾರ ಮಾಡಿರುವ ರೀತಿಯಲ್ಲಿ ಇಂದು ಚೌಡೇಶ್ವರಿ ದೇವಿಗೆ ಅಲಂಕರಿಸಲಾಗಿದೆ ಎಂದರು.

ದೇವಾಂಗ ಸಮುದಾಯದ ಮಹಿಳಾ ಭಜನಾ ಮಂಡಳಿ ಮಹಿಳಾ

ಸಂಘದವರು ಈ ದಿವ್ಯ ಅಲಂಕಾರ ಮಾಡಿದ್ದಾರೆ ದೇಗುಲಕ್ಕೆ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ದೇವಿಯ ದರ್ಶನ ಪಡೆಯುತ್ತಿದ್ದಾರೆ. ಈ ದಿನದಂದು ಚೌಡೇಶ್ವರಿ ದೇವಿಯನ್ನು ಪೂಜಿಸುವುದರಿಂದ ನಾಡಿನ ಜನತೆಗೆ ಸುಖ, ಶಾಂತಿ, ಸಮೃದ್ಧಿ ನೆಲೆಸುತ್ತದೆ. ಹೋಮ ಅವನಗಳ ಜೊತೆಗೆ ವಿಶೇಷ ಪೂಜೆ ಸಲ್ಲಿಸಲಾಗಿದೆ ಎಂದರು.

ಸಮಿತಿಯ ದೇಗುಲ ಸಮಿತಿಯ ಗೌರವಾಧ್ಯಕ್ಷ ಗಿರಿಯಪ್ಪ ಶೆಟ್ಟಿ, ಹೊನ್ನರಾಜು, ತೀರ್ಥಂಕರ್ ಮೋಹನ್ ಕುಮಾರ್ ದೇವಂಗ ಯುವಕ ಬಳಗ ಸೇರಿದಂತೆ ಸಮಿತಿಯವರು ಸಮುದಾಯದವರು ಇದ್ದರು

ದನದ ಮಾಂಸ ಮಾರಾಟ: ಆರೋಪಿ ಬಂಧನ

ಆಲೂರು: ಪಟ್ಟಣದ ಸುಣ್ಣದ ಬೀದಿಯಿಂದ ಕೆಳಗೆ ಹೊಲಗದ್ದೆಗಳಿರುವ ಪ್ರದೇಶದಲ್ಲಿ ಅಕ್ರಮವಾಗಿ ದನದ ಮಾಂಸ ಮಾರಾಟ ಮಾಡುತ್ತಿದ್ದ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ. ದೊಡ್ಡಿ ಬೀದಿಯ ನಿವಾಸಿ ಗೌಸ್ ಮೊಯಿದೀನ್ (27) ಬಂಧಿತ ಆರೋಪಿ.

ಪಟ್ಟಣದ ಸುಣ್ಣದ ಬೀದಿಯ ಕೆಳಗಿನ ಜೋಳದ ಹೊಲದ ಬಳಿ ಇದ್ದ ಶೆಡ್ ಹತ್ತಿರ ಹೋಗಿ ನೋಡಿದಾಗ ವ್ಯಕ್ತಿಯೊಬ್ಬ ಅಕ್ರಮವಾಗಿ ಗೋವನ್ನು ಕಡಿದು ಕೂಡಲೇ ಆತನನ್ನು ವಶಕ್ಕೆ ಪಡೆದು ವಿಚಾರಣೆ ಮಾಡಿದಾಗ, ಗೋ ಮಾಂಸ ಮಾರಾಟ ಮಾಡಲು ಗೋವನ್ನು ಕಡಿದಿರುವುದಾಗಿ ತಪ್ಪೊಪ್ಪಿಕೊಂಡಿದ್ದಾನೆ. ಸ್ಥಳೀಯ ಠಾಣೆ ಪಿಎಸ್‌ಐ ಪ್ರವೀಣ್ ಸೂ-ಮೋಟೊ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

ಮುಂದುವರೆದ ಅರಣ್ಯ ಒತ್ತುವರಿ ತೆರವು ಕಾರ್ಯಾಚರಣೆ

• ಪ್ರಜೋದಯ ವರದಿ

ಹೆತ್ತೂರು: ಯಸಳೂರು ಅರಣ್ಯ ವಲಯದ ವ್ಯಾಪ್ತಿಯಲ್ಲಿ ಯಸಳೂರು ಅರಣ್ಯಾಧಿಕಾರಿಗಳು ಹಾಗೂ ಸಿಬ್ಬಂದಿಗಳು ಒತ್ತುವರಿ ತೆರವು ಮಾಡಿದ್ದು ಇದು ಮಲೆನಾಡಿಗರಲ್ಲಿ ಆತಂಕ ಮೂಡಿಸಿದೆ.

ತಾಲ್ಲೂಕಿನ ಸಹಾಯಕ ಅರಣ್ಯಾಧಿಕಾರಿ ಮದುಸೂಧನ್ ಮಾರ್ಗದರ್ಶನದಲ್ಲಿ ಯಸಳೂರು ವಲಯ ಅರಣ್ಯಾಧಿಕಾರಿ ಎಸ್.ಆರ್.ಕೃಷ್ಣ ನೇತೃತ್ವದಲ್ಲಿ ಯಸಳೂರು ಹೋಬಳಿಯ ಕೊತ್ತನಹಳ್ಳಿ ಅಕೇಷಿಯಾ ನಡುತೋಪಿನಲ್ಲಿ ಯಡಕೇರಿ ಗ್ರಾಮದ ವೈ.ಟಿ ಪಾರ್ವತಮ್ಮ ಕೋ ಮಂಜೇಗೌಡ ಮತ್ತು ವೈ.ಎಂ ನಾಗರಾಜು ಬಿನ್ ಮಂಜೇಗೌಡ ಎಂಬುವರು ಸುಮಾರು 30 ಎಕರೆ ಅರಣ್ಯ ಪ್ರದೇಶದಲ್ಲಿ 12 ಎಕರೆಗೂ ಹೆಚ್ಚು ಜಾಗದಲ್ಲಿ ಬೇಲಿ ಮಾಡಿ ಒತ್ತುವರಿ

ಮಾಡಿರುವ ಆರೋಪದ ಹಿನ್ನೆಲೆಯಲ್ಲಿ ಶುಕ್ರವಾರ ಬೆಳಿಗ್ಗೆ 11 ಗಂಟೆಯ ವೇಳೆಗೆ ಅರಣ್ಯ ಇಲಾಖೆಯ ಸಿಬ್ಬಂದಿಗಳು ಸ್ಥಳಕ್ಕೆ ಆಗಮಿಸಿ ಒತ್ತುವರಿ ತೆರವುಗೊಳಿಸಿರುತ್ತಾರೆ.

ಕಳೆದ ಕೆಲವು ವಾರಗಳ ಹಿಂದೆ ಯಸಳೂರು ವಲಯ ಅರಣ್ಯಾಧಿಕಾರಿ ಕೃಷ್ಣರವರು ಮರಡಿಕೆರೆ ಗ್ರಾಮದ ಸರ್ವೆ ನಂ.361/1ರಲ್ಲಿ ಪ್ರಿಯಾ ಎಂಬ ದಲಿತ ಮಹಿಳೆ ಅರಣ್ಯ ಪ್ರದೇಶದಲ್ಲಿ ಮನೆಯನ್ನು ಕಟ್ಟಿದ್ದಾರೆ ಎಂಬ ಆರೋಪದ ಮೇಲೆ ಮನೆಯನ್ನು ತೆರವುಗೊಳಿಸಿದ್ದರು. ಇದು ವ್ಯಾಪಕ ವಿರೋಕ್ಕೆ ಕಾರಣವಾಗಿತ್ತು.

ದಲಿತ ಸಂಘಟನೆಗಳು ವಲಯ ಅರಣ್ಯಾಧಿಕಾರಿ ಕೃಷ್ಣ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಪ್ರತಿಭಟನೆ ಮಾಡಿದ್ದರು ಅಲ್ಲದೆ ಶಾಸಕ ಸಿಮೆಂಟ್ ಮಂಜು ಸಹ ತೀವ್ರಆಕ್ರೋಷ ವ್ಯಕ್ತಪಡಿಸಿದ್ದರು. ಇದೀಗ ತೆರವು ಕಾರ್ಯಾಚರಣೆ ಮುಂದುವರೆದಿದ್ದು ಮಲೆನಾಡಿಗರ ಆಕ್ರೋಶಕ್ಕೆ ಕಾರಣವಾಗಿದೆ.

ರಾಹುಲ್ ಗಾಂಧಿ ಆರೋಪದಲ್ಲಿ ಹುರುಳಿಲ್ಲ

• ಪ್ರಜೋದಯ ವರದಿ

ಬೆಂಗಳೂರು: ಕರ್ನಾಟಕದ ಕೆಲವು ಕಾಂಗ್ರೆಸ್ ಮುಖಂಡರು ಕೊಟ್ಟಿರುವುದನ್ನೇ ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಅವರು ದಾಖಲೆ ಎಂದುಕೊಂಡಿದ್ದಾರೆ. ಇದರಲ್ಲಿ ಯಾವುದೇ ಹುರುಳಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿರುಗೇಟು ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಹುಲ್ ಗಾಂಧಿ ಏನೋ ಕಡಿದು ಗುಡ್ಡೆ ಹಾಕಿದವರಂತೆ ಮಾತನಾಡುತ್ತಿದ್ದಾರೆ. ಈಗಾಗಲೇ ಚುನಾವಣಾ ಆಯೋಗ ಸ್ಪಷ್ಟನೆ ನೀಡಿದೆ. ಅವರು ಎತ್ತಿರುವ ಪ್ರಶ್ನೆಗಳಿಗೆ ಏಕೆ ಉತ್ತರಿಸಿಲ್ಲ ಎಂದು ಪ್ರಶ್ನಿಸಿದರು.

ರಾಹುಲ್‌ಗಾಂಧಿ ಪ್ರತಿಪಕ್ಷದ ನಾಯಕರು. ಅವರಿಗೆ ಅವರದೇ ಆದ ಜವಾಬ್ದಾರಿ ಇದೆ. ಬರೆದುಕೊಟ್ಟಿದ್ದನ್ನು

ಮೂರ್ಖರಂತೆ ಓದಿ ಅಪಹಾಸ್ಯಕ್ಕೆ ಗುರಿಯಾಗಬಾರದು. ಮತಗಳ್ಳತನ ನಡೆದಿದ್ದರೆ ಈವರೆಗೂ ಆಯೋಗಕ್ಕಾಗಲಿ ಇಲ್ಲವೇ ನ್ಯಾಯಾಲಯದಲ್ಲಿ ಏಕೆ ಪ್ರಶ್ನೆ ಮಾಡಿಲ್ಲ ಎಂದು ತರಾಟೆಗೆ ತೆಗೆದುಕೊಂಡರು.

ರಾಹುಲ್ ಗಾಂಧಿ ದೆಹಲಿಯಲ್ಲಿ, ಕರ್ನಾಟಕದಲ್ಲಿ ಸಹ ಬಹಳಷ್ಟು ಚುನಾವಣೆಯಲ್ಲಿ ಮತದಾರರ ಪಟ್ಟಿಯಲ್ಲಿ ಅಕ್ರಮ ನಡೆದಿದೆ. ನಕಲಿ ಮತದಾರರು ಸೇರಿದ್ದಾರೆ ಅಂತ ಹೇಳಿದ್ದಾರೆ. ರಾಹುಲ್ ಗಾಂಧಿ ಹೇಳಿಕೆ ನಂತರ ಕಾಂಗ್ರೆಸ್ ಹಿರಿಯ ನಾಯಕರು ಮೂರ್ಖರಂತೆ ಪ್ರಧಾನಿ ರಾಜೀನಾಮೆ ಕೇಳುತ್ತಿದ್ದಾರೆ ಎಂದು ವ್ಯಂಗ್ಯ ವಾಡಿದೆ. ಮಹದೇವಪುರ ವಿಧಾನ ಸಭಾ ಕ್ಷೇತ್ರದಲ್ಲಿ ಅಕ್ರಮ ನಡೆದಿದೆ ಎಂದು ಆರೋಪ ಮಾಡಿದ್ದಾರೆ. ಅದರ ಬಗ್ಗೆ ಅರವಿಂದ ಲಿಂಬಾವಳಿ ಅವರು ಮಾತನಾಡುತ್ತಾರೆ.

ನಕಲಿ ಮತದಾರರ ವಿಚಾರ ಇಟ್ಟುಕೊಂಡು ಚುನಾವಣಾ ಆಯೋಗ ಎಸ್‌ಐಆರ್‌ಮಾಡುತ್ತಿದೆ. ಬಿಹಾರದಲ್ಲಿ ವೋಟರ್ ಲೀಸ್ಟ್ ಸರಿ ಮಾಡಿ ಎಂದಿದ್ದಾರೆ. ಹಾಗಾದರೆ ಚುನಾವಣಾ ಆಯೋಗಕ್ಕೆ ಯಾಕೆ ಮನವಿ ಮಾಡಿದ್ದೀರಿ? ಎಂದು ಪ್ರಶ್ನೆ ಮಾಡಿದರು.

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ 16 ಸ್ಥಾನ ಗೆಲ್ಲಲಿದೆ ಎಂದು ಯಾವ ಸಮೀಕ್ಷೆಯೂ ಹೇಳಿರಲಿಲ್ಲ ಎಂದು ಟೀಕಿಸಿದರು.

ಅಭಿವೃದ್ಧಿ ಸೇವಾ ಟ್ರಸ್ಟ್‌ಗೆ ಹರೀಶ್ ಅಧ್ಯಕ್ಷ

ಸಕಲೇಶಪುರ: ಶ್ರೀ ಆದಿಶಕ್ತಿ ಪಟಲದಮ್ಮ ದೇವಿ ಅಭಿವೃದ್ಧಿ ಸೇವಾ ಟ್ರಸ್ಟ್‌ನ ನೂತನ ಸಮಿತಿಯ ಆಯ್ಕೆ ಪ್ರಕ್ರಿಯೆ ಇತ್ತೀಚೆಗೆ ನೆರವೇರಿದ್ದು, ಹರೀಶ್ ಎಸ್.ಆರ್. ಅವರನ್ನು ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.

ಪಟ್ಟಣದ ಕುಶಾಲನಗರ ಬಡಾವಣೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಅಧ್ಯಕ್ಷ ಸ್ಥಾನ ಸ್ವೀಕರಿಸಿದ ಹರೀಶ್ ಮಾತನಾಡಿ, ಸಮಾಜ ಸೇವೆ, ಶಿಕ್ಷಣ, ಆರೋಗ್ಯ ಮತ್ತು ಗ್ರಾಮೀಣಾಭಿವೃದ್ಧಿ ಟ್ರಸ್ಟ್‌ನ ಮೂಲ ಉದ್ದೇಶಗಳು. ನನ್ನ ಅವಧಿಯಲ್ಲಿ ಈ ಗುರಿಗಳನ್ನು ಸಾಕಾರಗೊಳಿಸಲು ಸಂಪೂರ್ಣ ಶ್ರಮಿಸುತ್ತೇನೆ. ಶಿಕ್ಷಣ ಮತ್ತು ಆರೋಗ್ಯ ಸೇರಿದಂತೆ ಸಾಮಾಜಿಕ ಕಲ್ಯಾಣ ಯೋಜನೆಗಳ ಮೂಲಕ ಸಮಾಜದ ಕೊನೆಯ ವ್ಯಕ್ತಿಗೂ ಸಹಾಯ ತಲುಪಿಸುವುದು ನಮ್ಮ ಗುರಿ ಎಂದು ಹೇಳಿದರು.

ನೂತನ ಸಮಿತಿಯಲ್ಲಿ ಕೃಷ್ಣ ಉಪಾಧ್ಯಕ್ಷ, ಚಂದ್ರಶೇಖರ್ ಕಾರ್ಯದರ್ಶಿ, ರಮೇಶ್ ಸಹ ಕಾರ್ಯದರ್ಶಿ ಹಾಗೂ ಖಜಾಂಚಿ ಹುದ್ದೆಗೂ ರಮೇಶ್ ಆಯ್ಕೆಯಾಗಿದ್ದಾರೆ.

ತೈಲ ಕಂಪನಿಗಳಿಗೆ 30,

ರಾಹುಲ್ ಗಾಂಧಿ ತಪ್ಪು ಮಾಹಿತಿ: ಲಿಂಬಾವಳಿ

• ಪ್ರಜೋದಯ ವರದಿ

ಬೆಂಗಳೂರು: ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ಮತಗಳ್ಳತನವಾಗಿದೆ ಎಂಬ ಸಂಸದ ರಾಹುಲ್ ಗಾಂಧಿ ಅವರ ಆರೋಪವನ್ನು ಮಾಜಿ ಸಚಿವ ಅರವಿಂದ ಲಿಂಬಾವಳಿ ಅವರು ತಳ್ಳಿಹಾಕಿದ್ದಾರೆ.

ಮಲ್ಲೇಶ್ವರಂನ ಬಿಜೆಪಿ ರಾಜ್ಯ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಮಹ ದೇವಪುರ ಕ್ಷೇತ್ರದಲ್ಲಿ ಒಟ್ಟು 6,80,514 ಮತದಾರರಿದ್ದಾರೆ. ನಮ್ಮ ಕ್ಷೇತ್ರಕ್ಕೆ ವಲಸಿಗರು ಬರುವು ದರಿಂದ ಮತದಾರರ ಸಂಖ್ಯೆ ಗಣನೀಯವಾಗಿ ಹೆಚ್ಚಳವಾಗಿದೆ. ಮೂರು ಲೋಕಸಭಾ ಚುನಾವ ಣೆಯಲ್ಲಿ ಬಿಜೆಪಿಗೆ 1 ಲಕ್ಷಕ್ಕಿಂತ ಹೆಚ್ಚು ಮತಗಳು ಬಂದಿವೆ ಎಂದರು.

ಮಹದೇವಪುರ ಕ್ಷೇತ್ರದಲ್ಲಿ ಬಿಜೆಪಿ ಗ್ರಾಫ್ ಮೇಲೆ ಹೋಗುತ್ತೆ. ರಾಹುಲ್ ಗಾಂಧಿಗೆ ಏಕೆ ಅಸ ಮಾಧಾನ ಆಗಿದೆ ಗೊತ್ತಿಲ್ಲ. 2019ರ ಲೋಕಸಭಾ ಚುನಾವಣೆಯಲ್ಲೂ ಬಿಜೆಪಿಗೆ

ಲೀಡ್ ಸಿಕ್ಕಿತ್ತು. ಏಳೂ ವಿಧಾನಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷವೇ ಮುಂದಿತ್ತು. ಮಹದೇವಪುರ ಕ್ಷೇತ್ರದಲ್ಲಿ ಮಾತ್ರ ಬಿಜೆಪಿಗೆ ಹೆಚ್ಚು ಮತ ಬಂದಿದೆ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ. ರಾಹುಲ್ ಗಾಂಧಿ ಅವರು ತಪ್ಪು ಮಾಹಿತಿ ನೀಡಿದ್ದಾರೆ. ನಾಲ್ಕು ವಿಧಾನಸಭಾ ಕ್ಷೇತ್ರಗಳಲ್ಲೂ ಬಿಜೆಪಿ ಮುನ್ನಡೆ ಸಾಧಿಸಿತ್ತು ಎಂದು ತಿಳಿಸಿದರು.

ರಾಹುಲ್ ಗಾಂಧಿಗೆ ಎಸ್.ಎಂ.ಕೃಷ್ಣ ಮೈಂಡ್ ಫುಲ್ ಆಫ್ ಇಮೆ ಚ್ಯುರಿಟಿಎಂದಿ ದ್ದರು. ಮತ ಎಂದರು.

ನಾನು ಸದ್ಯದಲ್ಲೇ ದೆಹಲಿಗೆ ಹೋಗಿ ಪ್ರಾತ್ಯಕ್ಷಿಕೆ ಕೊಡುತ್ತೇನೆ. ರಾಹುಲ್ ಗಾಂಧಿ ಆರೋಪದ ಕುರಿತು ರಿಯಾಲಿಟಿ ಚೆಕ್ ಮಾಡಿದ್ದೇವೆ. ಗುರುಪ್ರೀತ್ ಸಿಂಗ್ ಹೆಸರು ನಾಲ್ಕು ಸಲ ಮತದಾರರ ಪಟ್ಟಿಯಲ್ಲಿದೆ. ಅವರು ನಾಲ್ಕು ಸಲ ಮತದಾರರ ಚೀಟಿಗೆ ಅರ್ಜಿ ಸಲ್ಲಿಸಿದ್ದರು ಆದರೆ, ಗುರುಪ್ರೀತ್ ಸಿಂಗ್ ಅವರ ಅರ್ಜಿ ರಿಜೆಕ್ಟ್ ಆಗಿತ್ತು. ಲಖನೌನ ಮೂಲದ ಆದಿತ್ಯ ಸಿಂಗ್ ಅವರು ಕೆಲಸಕ್ಕೆ ಬೆಂಗಳೂರಿಗೆ ಬಂದು ವಿಧಾನಸಭೆ ಚುನಾವಣೆಯಲ್ಲಿ ಮತ ದಾನ ಮಾತನಾಡಿದ್ದಾರೆ.

ವಿಶಾಲ್ ಸಿಂಗ್ ವಾರಾಣಸಿಯವರು, ಮಾರತ್ತಹಳ್ಳಿ ನೆಲೆಸಿದ್ದಾರೆ. ಇವರು ಮೂವರೂ ಕೂಡ ಫಾರ್ಮ್ ನಂಬರ್ 7 ಸಲ್ಲಿಸಿದ್ದಾರೆ ಎಂದು ತಿಳಿಸಿದರು.

ವಿಳಾಸ ಇಲ್ಲದವರು 40,009 ಎಂದು ಆರೋಪ ಮಾಡಿದ್ದಾರೆ. ನಾವು ಪರಿಶೀಲನೆ ಮಾಡಿದಾಗ 13 ಜನ ಅಷ್ಟೇ ಇದ್ದರು. 1 ಮನೆಯಲ್ಲಿ 80 ಜನ ಇದ್ದರೆಂದು ಆರೋಪಿಸಿದ್ದಾರೆ. ನಾವು ಪರಿಶೀಲಿಸಿ ದಾಗ 6 ಜನರು ಮತ ಹಾಕಿದ್ದಾರೆ. ಹೋಟೆಲ್‌ನಲ್ಲಿ ಕೆಲಸ ಮಾಡುವವರು ಕೆಲ ರೂಮ್‌ಗಳಲ್ಲಿ ವಾಸ ಮಾಡುತ್ತಿದ್ದಾರೆ ಎಂದರು.

ನಿಮ್ಮ ಬಳಿಯಿರುವ ಮಾಹಿತಿಯನ್ನು ಚುನಾವಣಾ ಆಯೋಗಕ್ಕೆ ನೀಡಿ. ವಿಪಕ್ಷ ನಾಯಕರಾಗಿ ಇದು ಶೋಭೆಯಲ್ಲ. ನಿಮ್ಮ ಸರ್ಕಾರದಲ್ಲಿ ನಿಮ್ಮ ಅಧಿಕಾರಿಗಳೇ ಕೆಲಸ ಮಾಡಿದ್ದಾರೆ. ಚುನಾವಣಾ ಆಯೋಗಕ್ಕೆ ದೂರು ಕೊಡದೇ ಏಕೆ ಹೋದರು. ಮಹದೇವಪುರ ಕ್ಷೇತ್ರದ ಮಾಹಿತಿಯನ್ನ ವರಿಷ್ಠರು ಕೇಳಿದ್ದಾರೆ. ಕೇಂದ್ರದ ನಮ್ಮ ನಾಯಕರು ಕ್ಷೇತ್ರದ ಮಾಹಿತಿ ಕೇಳಿದ್ದಾರೆ. ಮಾಹಿತಿಯನ್ನು ನಮ್ಮ ಹೈಕಮಾಂಡ್ ನಾಯಕರಿಗೆ ಕೊಡುತ್ತೇವೆ ಎಂದು ಹೇಳಿದರು.

ರಾಹುಲ್ ಗಾಂಧಿ ಅವರೇ ನಿಮ್ಮ ಪಕ್ಷದವರು ನಿದ್ದೆ ಮಾಡುತ್ತಿದ್ರಾ? 45 ದಿನಗಳಲ್ಲಿ ಹಾಕಬಹುದಾಗಿದ್ದ ಅರ್ಜಿಯನ್ನು ಇನ್ನೂ ಹಾಕಿಲ್ಲ. ಅವರು ನಿದ್ದೆ ಮಾಡುತ್ತಿದ್ದರೂ ಹೇಳುವಾಗ ಸತ್ಯ ಹೇಳಬೇಕಲ್ವಾ? ಯಾವುದೇ ದೂರು ಕೊಡದೇ ತಮ್ಮ ಆಡಳಿತ ಇರುವ ರಾಜ್ಯಜ್ಜೆ ಬಂದು ಅವಾಜ್ ಹಾಕುತ್ತಿರುವುದಕ್ಕೆ ನಾವು ಹೆದರಲ್ಲ. ಜಿ.ಪರಮೇಶ್ವರ್ ಹೇಳಿದಂತೆ ನಾವು ಗುದ್ದುವವರಲ್ಲ. ನಿಮ್ಮ ಬಳಿ ಇರುವ ಮಾಹಿತಿಯನ್ನು ಸಾರ್ವಜನಿಕವಾಗಿ ಬಿಡುಗಡೆ ಮಾಡಿ. ಚುನಾವಣಾ ಆಯೋಗ ಕೇಳುತ್ತಿದೆ, ಕೊಡಿ. ವಿಪಕ್ಷ ನಾಯಕರಾಗಿ ಇದು ಶೋಭೆಯಲ್ಲ. ನಿಮ್ಮ ಸರ್ಕಾರದಲ್ಲಿ ನಿಮ್ಮ ಅಧಿ ಕಾರಿಗಳೇ ಕೆಲಸ ಮಾಡಿದ್ದಾರೆ. ಚುನಾವಣಾ ಆಯೋಗಕ್ಕೆ ದೂರು ಕೊಡದೇ ಏಕೆ ವಾಪಾಸ್ ಹೋದರು ಅಂತ ಅವರನ್ನೇ ಕೇಳಬೇಕು ಎಂದರು.

ಇಡೀ ದೇಶದಲ್ಲೇ ಮತಗಳ್ಳತನ: ರಾಹುಲ್

» ಮೊದಲನೇ ಪುಟದಿಂದ

ಮಹದೇವಪುರ ವಿಧಾನಸಭಾ ಕ್ಷೇತ್ರದ ಮತಗಟ್ಟೆಗಳಲ್ಲಿ ಪರಿಶೀಲಿಸಿದ್ದು, ಆ ಕ್ಷೇತ್ರ ಒಂದರಲ್ಲೇ 6.5 ಲಕ್ಷ ಮತಗಳಿತ್ತು ಎಂದು ಆರೋಪಿಸಿದರು.

ಒನ್ ಮ್ಯಾನ್, ಒನ್ ವೋಟ್ ಎಂಬುದರ ಮೇಲೆ ಆಯೋಗ ದಾಳಿ ಮಾಡುತ್ತಿದೆ. ಸಂವಿಧಾ ನದ ಮೇಲೆ ದಾಳಿ ಮಾಡಿ ನೀವು ಬಚಾವ್ ಆಗುತ್ತೀರಾ ಎಂದು ಮತ್ತೊಮ್ಮೆ ಯೋಚನೆ ಮಾಡಿ. ಸಮಯ ಬಂದೇ ಬರುತ್ತದೆ ನಿಮ್ಮನ್ನು ಹಿಡಿದು ಹಾಕುತ್ತೇವೆ. ಒಬ್ಬೊಬ್ಬರನ್ನಾಗಿ ಹಿಡಿದು ಹಾಕುವುದು ನಿಶ್ಚಿತ. ನೀವು ಸಂವಿಧಾನದ ಮೇಲೆ ದಾಳಿ ಮಾಡಿದರೆ ನಾವು ನಿಮ್ಮ ಮೇಲೆ ದಾಳಿ ಮಾಡುತ್ತೇವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಅಂತ ಮಹದೇವಪುರ ದಿಂದ ಶುರು ಮಾಡಿದ್ದಾರೆ. 2008 ರಿಂದ ನಾಲ್ಕು ಬಾರಿ ವಿಧಾನ ಸಭೆ ಮತ್ತು ನಾಲ್ಕು ಬಾರಿ ಲೋಕಸಭೆ ಚುನಾವಣೆಯಲ್ಲಿ ಮಹದೇವಪುರದಲ್ಲಿ ಬಿಜೆಪಿ ಗೆದ್ದಿದೆ

ಉತ್ತರಾಖಂಡ್‌ನಲ್ಲಿ ಮೇಘ ಸ್ಫೋಟ: 80 ಜನರ ರಕ್ಷಣೆ

• ಪ್ರಜೋದಯ ವರದಿ

ಡೆಹ್ರಾಡೂನ್: ಮೇಘ ಸ್ಫೋಟ ಕಾರಣದಿಂದ ಉಂಟಾದ ದಿಢೀರ್ ಪ್ರವಾಹದಿಂದ ನಲುಗಿ ರುವ ವಿವಿಧ ಪ್ರದೇಶಗಳಲ್ಲಿ ಶುಕ್ರವಾರವೂ ರಕ್ಷಣಾ ಕಾರ್ಯ ಮುಂದುವರಿಯಿತು.

ಚಿನೂಕ್ ಹಾಗು ಎಂಐ17 ಹೆಲಿಕಾಪ್ಟರ್‌ಗಳನ್ನು ಬಳಸಿ ಶುಕ್ರವಾರ ಬೆಳಿಗ್ಗೆ 80 ಜನರನ್ನು ರಕ್ಷಣೆ ಮಾಡಲಾಯಿತು. ಅವರನ್ನು ಐಟಿಬಿಪಿಯ ಮಾಟ್ಲಿ ಹೆಲಿಪ್ಯಾಡ್‌ಗೆ ಸುರಕ್ಷಿತವಾಗಿ ಸ್ಥಳಾಂತರಿಸಲಾಗಿದೆಯೆಂದು ಅಧಿಕಾರಿಗಳು ತಿಳಿಸಿದ್ದಾರೆ.

ಈವರೆಗೂ 354 ಮಂದಿಯನ್ನು ರಕ್ಷಿಸಲಾಗಿದೆ. 9 ಯೋಧರು, 60 ಜನರು ನಾಪತ್ತೆಯಾ ಗಿದ್ದು, ಶೋಧ ಕಾರ್ಯ ಮುಂದುವರಿದಿದೆ ಎಂದು ಸೇನೆ ತಿಳಿಸಿದೆ. ಉತ್ತರಕಾಶಿಯ ಧರಾಲಿ, ಮುಖ್ಬಾ ಗ್ರಾಮದಲ್ಲಿ ನಾಪತ್ತೆಯಾದವರ ಶೋಧಕ್ಕೆ ಅಗತ್ಯವಿರುವ ಅತ್ಯಾಧುನಿಕ ಯಂತ್ರೋಪಕರಣಗಳನ್ನು ವಾಯುಪಡೆ ವಿಮಾನ ಹಾಗು ಹೆಲಿಕಾಪ್ಟರ್‌ಗಳ ಮೂಲಕ ಕಳುಹಿಸಲಾಗುತ್ತಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ರಸ್ತೆಗಳು ಕುಸಿದಿರುವುದರಿಂದ ಸಂತ್ರಸ್ತರ ಸ್ಥಳಾಂತರಕ್ಕೆ ತೊಡಕಾಗಿದ್ದು ವಾಯು ಮಾರ್ಗದ ಮೂಲಕ ರಕ್ಷಣೆ ಮಾಡಲಾಗುತ್ತಿದೆ. ಅವರಿಗೆ ಅಗತ್ಯ ಸಾಮಾಗ್ರಿ ಹಾಗು ಆಹಾರವನ್ನು ಹೆಲಿಕಾಪ್ಟರ್‌ಗಳ ಮೂಲಕ ತಲುಪಿಸಲಾಗುತ್ತಿದೆಯೆಂದು ಎನ್‌ಡಿಆರ್‌ಎಫ್ ಅಧಿಕಾರಿಯೊಬ್ಬರು ಹೇಳಿದರು.

ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರು ಉತ್ತರ ಕಾಶಿಯಲ್ಲಿಯೇ ವಾಸ್ತವ್ಯ ಹೂಡಿದ್ದು, ರಕ್ಷಣಾ ಕಾರ್ಯಾಚರಣೆಯ ಮೇಲ್ವಿಚಾರಣೆ ನಡೆಸುತ್ತಿದ್ದಾರೆ. ಶುಕ್ರವಾರ ಸಾಮಾಜಿಕ ಜಾಲತಾಣ ಫೇಸ್‌ಬುಕ್‌ನಲ್ಲಿ ಮಾಹಿತಿ ಹಂಚಿಕೊಂಡಿದ್ದು ಬೆಳಿಗ್ಗೆ ಧರಾಲಿಯಲ್ಲಿ ನಡೆಯುತ್ತಿರುವ ರಕ್ಷಣಾ ಕೆಲಸ ಹಾಗು ಪರಿಹಾರ ಕಾರ್ಯಗಳನ್ನು ಪರಿಶೀಲನೆ ಮಾಡಿದ್ದೇನೆಂದು ತಿಳಿಸಿದ್ದಾರೆ.

ಪುಷ್ಕರ್ ಸಿಂಗ್ ಧಾಮಿ ಅವರು ತಮ್ಮ ಒಂದು ತಿಂಗಳ ವೇತನವನ್ನು ಸಂತ್ರಸ್ತರ ಪರಿಹಾರ ನಿಧಿಗೆ ನೀಡಲು ನಿರ್ಧರಿಸಿದ್ದಾರೆ. ಸಂಕಷ್ಟದ ಈ ಸಮಯದಲ್ಲಿ ಸಂತ್ರಸ್ತರೊಂದಿಗೆ ರಾಜ್ಯ ಸರ್ಕಾರ ನಿಂತಿದೆ. ಪ್ರತಿಯೊಬ್ಬರೂ ತಮ್ಮ ಸಾಮರ್ಥ್ಯಕ್ಕೆ ಅನುಗುಣವಾಗಿ ಸಹಾಯ ಮಾಡುವಂತೆ ನಾಗರಿಕರಲ್ಲಿ ಮನವಿ ಮಾಡಿದ್ದಾರೆ.

ಮುದಿಬೆಟ್ಟ ಕಾವಲಿನಲ್ಲಿ ದೇಗುಲ ನಿರ್ಮಾಣಕ್ಕೆ ಸಿದ್ಧತೆ

» ಮೊದಲನೇ ಪುಟದಿಂದ

ದೇಗುಲ ನಿರ್ಮಾಣಕ್ಕೆ ಸಕಲ ಸಿದ್ಧತೆ

ಮುದಿಬೆಟ್ಟ ಕಾವಲು ಬಂಡೆಯ ಮೇಲೆ ಈಗಾಗಲೇ ದೇಗುಲ ನಿರ್ಮಾಣಕ್ಕೆ ತಳಹದಿ ನಿರ್ಮಿಸಲಾಗಿದ್ದು ನೀರಿನ ತೊಟ್ಟಿ, ವಿದ್ಯುತ್ ವ್ಯವಸ್ಥೆ ಮಾಡಲಾಗಿದೆ. ಕಲ್ಲು, ಜಲ್ಲಿ, ಎಂ- ಸ್ಯಾಂಡ್ ಎಲ್ಲವನ್ನು ಶೇಖರಿಸಲಾಗಿದೆ. ಆ. 13 ರಿಂದ ಆ.17ರ ವರಗೆ ಪೂಜಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅಲ್ಲದೆ ದೇಗುಲ ನಿರ್ಮಾಣಕ್ಕೆ ಸುತ್ತಮುತ್ತಲ ಗ್ರಾಮಸ್ಥರಿಂದ ದೇಣಿಗೆ ಸಂಗ್ರಹಿಸಲಾಗಿದೆ ಎಂದು ವಿಷಕಂಠೇಗೌಡ ತಿಳಿಸಿದರು.

ಚನ್ನರಾಯಪಟ್ಟಣ ಪಿಎಸ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಎನ್.ಟಿ.ಬೊಮ್ಮೇಗೌಡ, ದಿಡಗ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಎನ್.ಆರ್.ರತ್ನರಾಜ್, ಮಾಜಿ ಸದಸ್ಯ ಡಿ.ಬಿ. ವೆಂಕಟೇಶ್, ದಿಡಗ ಸೊಸೈಟಿ ಮಾಜಿ ಅಧ್ಯಕ್ಷ ಹೆಚ್.ಕೆ.ಯೋಗೇಶ್, ನಿರ್ದೇಶಕ ಹೆಚ್.ಎಸ್. ಮಹೇಶ್, ಬಾಳಗಂಚಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಮಂಜೇಗೌಡ, ಗಂಗಾಧರ್, ಮಾಜಿ ಸದಸ್ಯ ಹೊನ್ನಶೆಟ್ಟಿಹಳ್ಳಿ ಮಂಜೇಗೌಡ, ಗ್ರಾಮಸ್ಥರಾದ ಹೆಚ್. ಆರ್.ಗಣೇಶ್‌ಗೌಡ, ಹೆಚ್.ಆರ್.ಮಹೇಶ್, ವೆಂಕಟೇಶ್ ಗೌಡ, ಜಗನ್ನಾಥ್, ಸುನೀಲ್, ಶ್ರೀನಿವಾಸ್, ಲೋಕೇಶ್, ಮಂಜು, ತಾಯಮ್ಮ, ವಿಜಯಲಕ್ಷ್ಮೀ, ರೂಪ, ಸೀಮ, ಸುನಂದಮ್ಮ, ಲತಾ, ಸಂಗೀತಾ ಇತರರಿದ್ದರು. ಹಿರೀಸಾವೆ ಸಿಪಿಐ ಸಂತೋಷ್ ಹಾಗು ಪಿಎಸ್‌ಐ ರೂಪ ಬೀರಾದಾರ ನೇತೃತ್ವದಲ್ಲಿ ಭದ್ರತೆ ಕೈಗೊಳ್ಳಲಾಗಿತ್ತು.

ಭಾರತ-ಪಾಕ್ ಯುದ್ಧ ನಿಲ್ಲಿಸಿದ್ದು ನಾವೇ, ಶಾಂತಿಯ ಪಿತಾಮಹ ಟ್ರಂಪ್: ರುಬಿಯೊ

• ಪ್ರಜೋದಯ ವರದಿ

ನ್ಯೂಯಾರ್ಕ್: ಭಾರತ-ಪಾಕಿಸ್ತಾನ ಯುದ್ಧವನ್ನು ನಿಲ್ಲಿಸಲು ಅಮೇರಿಕಾ ನೇರವಾಗಿ ಕಣಕ್ಕಿಳಿಯಿತು ಎಂದು ಅಮೇರಿಕಾದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಹೇಳಿದ್ದಾರೆ.

ಕದನ ವಿರಾಮ ಜಾರಿಗೆ ತರಲು ತಾನೇ ಕಾರಣ ಎಂದು ಟ್ರಂಪ್ ಈಗಾಗಲೇ ಮೇ 10 ರಿಂದ 25 ಬಾರಿ ಹೇಳಿದ್ದಾರೆ. ಇದೀಗ ರುಬಿಯೊ ಕೂಡ ಅಧ್ಯಕ್ಷರ ಹೇಳಿಕೆಯನ್ನು ಸಮರ್ಥಿಸಿಕೊಂಡಿದ್ದು, ಭಾರತಪಾಕಿಸ್ತಾನ ಯುದ್ಧಕ್ಕೆ ಮುಂದಾದಾಗ ಅಮೇರಿಕಾ ನೇರವಾಗಿ ಕಣಕ್ಕಿಳಿಯಿತು. ಅಣ್ವಸ್ತ್ರ ಬಲ ಹೊಂದಿರುವ ನೆರೆಹೊರೆ ದೇಶಗಳ ನಡುವೆ ಟ್ರಂಪ್ ಅವರ ಪಾತ್ರದಿಂದ ಶಾಂತಿ ಸ್ಥಾಪನೆ ಸಾಧ್ಯವಾಯಿತು ಎಂದು ಪ್ರತಿಪಾದಿಸಿದ್ದಾರೆ.

ಶಾಂತಿ ಸ್ಥಾಪನೆಗೆ ಟ್ರಂಪ್ ಬದ್ಧರಾಗಿದ್ದಾರೆ. ಅವರು ಶಾಂತಿಯ ಪಿತಾಮಹ ಎಂದು ರುಬಿಯೊ ಅಮೇರಿಕಾದ ಇಡಬ್ಲ್ಯೂಟಿಎನ್ ವಾಹಿನಿಗೆ ನೀಡಿದ ಸಂದರ್ಶನದಲ್ಲಿ ಬಣ್ಣಿಸಿದ್ದಾರೆ.

ಕಾಂಬೋಡಿಯಾಥಾಯ್ಲೆಂಡ್, ಅಜೆರ್‌ಬೈಜಾನ್ ಅರ್ಮೆನಿಯಾ ಸೇರಿ ಜಗತ್ತಿನ ಹಲವು ದೇಶಗಳ ಮಧ್ಯದ ಸಂಘರ್ಷಗಳನ್ನು ಟ್ರಂಪ್ ಮಧ್ಯಪ್ರವೇಶಿಸಿ ಶಮನಗೊಳಿಸಿದ್ದಾರೆ ಎಂದು ರುಬಿಯೊ ಪಟ್ಟಿ ಮಾಡಿದ್ದಾರೆ. 70 ಲಕ್ಷ ಜನರ ಸಾವಿಗೆ ಕಾರಣವಾದ ಡೆಮಾಕ್ರಟಿಕ್ ರಿಪಬ್ಲಿಕ್ ಆಫ್ ಕಾಂಗೊ ಮತ್ತು ರವಾಂಡ ನಡುವೆ ಮೂರು ದಶಕಳಿಂದ ಮುಂದುವರಿದಿದ್ದ ಸಂಘರ್ಷವನ್ನು ಕೊನೆಗಾಣಿಸಿ ಶಾಂತಿ ಒಪ್ಪಂದಕ್ಕೆ ಸಹಿ ಹಾಕಿಸುವಲ್ಲಿ ಅಮೇರಿಕಾ ಮಹತ್ವದ ಪಾತ್ರ ವಹಿಸಿತು ಎಂದು ಅವರು ಹೇಳಿದ್ದಾರೆ.

ಕ್ರೀಡಾ ಅಭಿವೃದ್ಧಿಗೆ ಸರ್ಕಾರದಿಂದ ಹೆಚ್ಚಿನ ಅನುದಾನಕ್ಕೆ ಆಗ್ರಹ

• ಪ್ರಜೋದಯ ವರದಿ

ಚನ್ನರಾಯಪಟ್ಟಣ: ದೇಶದಲ್ಲಿನ ಕ್ರೀಡಾಕ್ಷೇತ್ರದಲ್ಲಿ ಕ್ರೀಡಾಪಟುಗಳು ಉತ್ತಮ ಸಾಧನೆ ಮಾಡಿ, ದೇಶಕ್ಕೆ ಕೀರ್ತಿ ತರಬೇಕಾದಲ್ಲಿ ಸರ್ಕಾರ ಕ್ರೀಡಾ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ಸೇರಿ ಕ್ರೀಡಾ ಸೌಲಭ್ಯ ಒದಗಿಸಬೇಕೆಂದು ಶಾಸಕ ಸಿ.ಎನ್.ಬಾಲಕೃಷ್ಣ ಅವರು ಆಗ್ರಹಿಸಿದರು.

ಪಟ್ಟಣದ ತಾಲ್ಲೂಕು ಕ್ರೀಡಾಂಗಣದಲ್ಲಿ ಕಸಬಾ ಹೋಬಳಿ ಮಟ್ಟದ 2025-26ನೇ ಸಾಲಿನ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದ ಅವರು, ಪಟ್ಟಣದ ಕ್ರೀಡಾಂಗಣದಲ್ಲಿ 60 ಲಕ್ಷ ರೂ. ವೆಚ್ಚದಲ್ಲಿ ಪ್ರತ್ಯೇಕ ಶೌಚಾಲಯಗಳನ್ನು ನಿರ್ಮಿಸಲು ಕ್ರಮ ಕೈಗೊಂಡಿದ್ದು, ಕ್ರೀಡಾಂಗಣದ ಅಭಿವೃದ್ಧಿಗೆ ಹೆಚ್ಚಿನ ಅನುದಾನದ ಅವಶ್ಯಕತೆಯಿದ್ದು, ಸರ್ಕಾರ ರಾಜ್ಯದ ಕ್ರೀಡಾಂಗಣಗಳ ಅಭಿವೃದ್ಧಿಗೆ ನಿಗದಿಪಡಿಸಿರುವ 14 ಕೋಟಿ ರೂ. ಗಳಲ್ಲಿ ಕ್ರೀಡಾಂಗಣಗಳನ್ನು ಅಭಿವೃದ್ಧಿಪಡಿಸಲು ಸಾಧ್ಯವಾಗುವುದಿಲ್ಲ. ಕ್ರೀಡಾಂಗಣ ಅಭಿವೃದ್ಧಿಗೆ ಕನಿಷ್ಠ 100 ಕೋಟಿ ರೂ. ಮೀಸಲಿಡಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು.

ಮಕ್ಕಳು ಶಿಕ್ಷಣದ ಜೊತೆ ಕ್ರೀಡೆಗೂ ಹೆಚ್ಚಿನ ಒತ್ತು ನೀಡಬೇಕು. ಕ್ರೀಡೆಯಲ್ಲಿ ತೊಡಗಿಸಿಕೊಂಡರೆ ಶಾರೀರಿಕ ಹಾಗು ಮಾನಸಿಕ ವಿಕಸನ

ಸಾಧ್ಯ. ಕೇವಲ ಪಠ್ಯಪುಸ್ತಕಗಳ ಅಧ್ಯಯನಕ್ಕೆ ಮಾತ್ರ ಸೀಮಿತರಾಗಬಾರದು. ಶಾಲಾ ಹಂತದಲ್ಲೇ ಕ್ರೀಡಾ ಮನೋಭಾವ ಬೆಳೆಸಿಕೊಂಡು ಹೋಬಳಿ ಮಟ್ಟದಿಂದ ಜಿಲ್ಲಾ, ರಾಜ್ಯ, ರಾಷ್ಟ್ರ ಮಟ್ಟದವರೆಗೂ ಕ್ರೀಡೆಯಲ್ಲಿ ಸಾಧನೆ ಮಾಡಬಹುದು. ವಿದ್ಯಾರ್ಥಿಗಳು ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಬೇಕು. ಮಕ್ಕಳ ಕ್ರೀಡಾ ಪ್ರತಿಭೆ ಗುರುತಿಸಲು ಹಾಗೂ ಸರ್ವಾಂಗೀಣ ಅಭಿವೃದ್ಧಿಗೆ ಕ್ರೀಡಾ ಕೂಟ ಸಹಕಾರಿ ಎಂದರು.

ಕ್ರೀಡಾಕೂಟದಲ್ಲಿ ಪುರಸಭಾ ಉಪಾಧ್ಯಕ್ಷ ಕವಿತಾರಾಜು ಧ್ವಜಾರೋಹಣ ನೆರವೇರಿಸಿದರು. ಸ್ಥಾಯಿ ಸಮಿತಿ ಅಧ್ಯಕ್ಷ ಎಸ್.ಎ.ಗಣೇಶ್ ಕ್ರೀಡಾ ಜ್ಯೋತಿ ಸ್ವೀಕರಿಸಿದರು. ಪುರಸಭಾ ಮಾಜಿ ಅಧ್ಯಕ್ಷೆ ಬನಶಂಕರಿ ರಘು, ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್.ಎನ್.ದೀಪ, ಕ್ಷೇತ್ರ ಸಮನ್ವಯಾಧಿಕಾರಿ ಕೆ.ಎನ್.ಅನಿಲ್, ಅಕ್ಷರ ದಾಸೋಹ ಅಧಿಕಾರಿ ಉಮಾಶಂಕರ್, ತಾಲ್ಲೂಕು ದೈಹಿಕ ಶಿಕ್ಷಣ ಪರೀಕ್ಷಕ ಕೆ.ಟಿ.ಆನಂದ್, ಪಿಎಂಶ್ರೀ ಶಾಲೆಯ ಮುಖ್ಯ ಶಿಕ್ಷಕ ಪ್ರಕಾಶ್, ಪುರಸಭಾ ಮುಖ್ಯಾಧಿ ಕಾರಿ ಆರ್.ಯತೀಶ್‌ಕುಮಾರ್, ರಾಜ್ಯ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಮಂಜುನಾಥ್, ಶಿಕ್ಷಣ ಇಲಾಖೆಯ ವಿ.ಜಿ. ದ್ವಾವೇಗೌಡ, ಶಿವಾನಂದ್, ಜಿ.ಎನ್.ರವಿ, ಚಿಕ್ಕೇಗೌಡ, ಗಾಯತ್ರಮ್ಮ, ಕಾಳೇಗೌಡ, ಶ್ರೀನಿವಾಸ್, ನಾಗೇಂದ್ರ ಕುಮಾರ್, ನಾಗರಾಜು, ಲೋಕೇಶ್, ಜಯಪ್ರಕಾಶ್, ಯಾದವ ರಾಜ್, ರಂಗಸ್ವಾಮಿ ಕಸಬಾ ಹೋಬಳಿಯ ಎಲ್ಲಾ ದೈಹಿಕ ಶಿಕ್ಷಣ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಬೈಕ್ ಡಿಕ್ಕಿ : ಪಾದಚಾರಿ ಸಾವು

ಬೇಲೂರು: ರಸ್ತೆ ಬದಿ ನಡೆದುಕೊಂಡು ಹೋಗುತ್ತಿದ್ದ ವ್ಯಕ್ತಿಯೊಬ್ಬರು ಬೈಕ್ ಡಿಕ್ಕಿಯಾಗಿ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಘಟ್ಟದಹಳ್ಳಿ-ಸಾಣೇನಹಳ್ಳಿ ಮಾರ್ಗಮಧ್ಯೆ ನಡೆದಿದೆ.

ತಾಲ್ಲೂಕಿನ ಸಾಣೇನಹಳ್ಳಿ ಗ್ರಾಮದ ಸುಖಾನಂದ ಮೃತರು. ಗುರುವಾರ ಸಂಜೆ 4ರ ಸಮಯದಲ್ಲಿ ಹುಲಿಕಲ್ಲಹಳ್ಳಿ ಸಮೀಪದ ಜಮೀನಿನಲ್ಲಿ ಕಟ್ಟಿದ್ದ ಹಸುಗಳನ್ನು ಹೊಡೆದುಕೊಂಡು ಬರಲು ಹೋಗುತ್ತಿದ್ದಾಗ ಘಟ್ಟದಹಳ್ಳಿ ಕಡೆಯಿಂದ ವೇಗವಾಗಿ ಬಂದ ಬೈಕ್ ಡಿಕ್ಕಿಯಾಗಿದೆ. ಆ